ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಸಂಪುಟ : 7 । ಸಂಚಿಕೆ : 12 । ಡಿಸೆಂಬರ್-2025 । ಪುಟಗಳು : 20 । ಬೆಲೆ : 25/-

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ




## ಬೆಂಗಳೂರಿನಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಮುಖ್ಯಮಂತ್ರಿಗಳಿಂದ ಉದ್ಘಾಟನೆ




## ಚಾಮರಾಜನಗರದಲ್ಲಿ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ

ಬೆಂಗಳೂರಿನಲ್ಲಿ ನಡೆದ 72ನೇ ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಸಹಕಾರ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸುತ್ತಿರುವ ಸಹಕಾರಿಗಳು, ಸಹಕಾರ ಇಲಾಖೆ ನಿವೃತ್ತ ಅಧಿಕಾರಿಗಳಿಗೆ, "ಸಹಕಾರ ರತ್ನ" ಪ್ರಶಸ್ತಿ ನೀಡಿ ಗೌರವಿಸಿ ಸನ್ಮಾನಿಸಿ, ಅವರ ಸೇವೆಯನ್ನು ಶ್ಲಾಘಿಸಿದರು.



# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು

## ಆಡಳಿತ ಮಂಡಳಿ



ಶಿದ್ದನಗೌಡ ಸಂಣರಾಮನಗೌಡ ಪಾಟೀಲ
ಸಹಕಾರಿ ಪಿತಾಮಹ



ಶ್ರೀ ಬಿ.ಎಲ್. ಲಕ್ಕೇಗೌಡರು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಂಸ್ಥಾಪಕ ಅಧ್ಯಕ್ಷರು



ಎಸ್. ಚಂದ್ರಶೇಖರ್
ಅಧ್ಯಕ್ಷರು



ಧರೇಪ್ಪ ಎಂ. ಆಲಗೂರ
ಉಪಾಧ್ಯಕ್ಷರು



ಸಿ.ಎಂ. ಮಾರೇಗೌಡ
ನಿರ್ದೇಶಕರು



ಡಾ. ಬಿ.ಡಿ. ಭೂಕಾಂತ
ನಿರ್ದೇಶಕರು



ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು



ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ನಿರ್ದೇಶಕರು



ಎಂ.ಜಿ. ನರೇಂದ್ರಕುಮಾರ
ನಿರ್ದೇಶಕರು



ಕೆ. ಕೃಷ್ಣಮೂರ್ತಿ
ನಿರ್ದೇಶಕರು



ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು



ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು



ಉಮೇಶ ಶಿ. ಬಾಳಿ
ನಿರ್ದೇಶಕರು



ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು



ಡಾ. ನಾಗೇಂದ್ರ ಡಿ.ಎಲ್.
ನಿರ್ದೇಶಕರು



ವೈ. ಶ್ರೀನಿವಾಸಗೌಡ
ನಿರ್ದೇಶಕರು



ಕೆ. ಜಗದೀಶ ಕಂದಿಕೆರೆ
ನಿರ್ದೇಶಕರು



ರಾಜೇಶ್ ಟಿ.
ನಿರ್ದೇಶಕರು



ಶಿವಕುಮಾರ ಬಸವರಾಜು ಬಾದವಾಡಗಿ
ನಿರ್ದೇಶಕರು



ಶಿವಾನಂದ ಬಸಪ್ಪ ನ್ಯಾಮಗೌಡ
ನಿರ್ದೇಶಕರು



ಹೆಚ್. ಅಶೋಕ್
ನಿರ್ದೇಶಕರು




ಚಂದ್ರಶೇಖರ್ ಕೋಲ್ಹಾರು
ನಿರ್ದೇಶಕರು



ಪ್ರಜ್ವಲ್ ಕೆ.ಎನ್.
ಮುಖ್ಯಕಾರ್ಯನಿರ್ವಹಣಾಧಿಕಾರಿ


SAHAKARA VARTHA PATHRIKE KANNADA MONTHLY
RNI-Reg No.KARKAN/2018/75796
Post Reg No.KA-BGW/1816/2025-27
Posting Date : 1 and 5 Every Month
Posted at : P/C RMS Bhavan, Bangalore PSO,
Blore-26 Published On : 30th of Previous Month
License to post without prepayment
PMG BG/WPP-405/2025-27




ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಯಮಿತ
ಬೆಂಗಳೂರು ನಂ. 126 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ, ಜೆಬಿ ಕಾವಲ್,
ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096

Printed at : Biligiri Printers
Chamrajpet, Bengaluru - 18

## ಸಂಪಾದಕೀಯ



ಎಸ್. ಚಂದ್ರಶೇಖರ್
ಅಧ್ಯಕ್ಷರು

ಸಹಕಾರ ಚಳುವಳಿಯಲ್ಲಿ ಯುವಜನರು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕಾದ ಅಗತ್ಯವೂ ಇದೆ. ರಾಜ್ಯದ ಜನಸಂಖ್ಯೆಗೆ ಹೋಲಿಸಿದ್ದಲ್ಲಿ ಈಗಿರುವ 2,70 ಕೋಟಿ ಸದಸ್ಯತ್ವ ಕಡಿಮೆ ಅನಿಸುತ್ತದೆ. ಸಹಕಾರ ಕ್ಷೇತ್ರದಿಂದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಮುಖ್ಯಮಂತ್ರಿ ಅವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ.

# ಅಖಿಲ ಭಾರತ ಸಹಕಾರ ಸಪ್ತಾಹ ಮುಖ್ಯಮಂತ್ರಿಗಳ ಘೋಷಣೆ ಸ್ವಾಗತ

2025ರ ನವಂಬರ್ 14ರಿಂದ 20ರವರೆಗೆ ರಾಜ್ಯದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಯಶಸ್ವಿಯಾಗಿ ಆಚರಣೆಗೊಂಡಿದೆ. ಈ ಬಾರಿಯ ಸಹಕಾರ ಸಪ್ತಾಹದ ಉದ್ಘಾಟನಾ ಮತ್ತು ಸಮಾರೋಪ ಸಮಾರಂಭದಲ್ಲಿ ಸಹಕಾರ ಖಾತೆಯ ಜವಾಬ್ದಾರಿಯನ್ನು ಹೊತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಭಾಗವಹಿಸಿದ್ದುದು ಸಹಕಾರಿಗಳಲ್ಲಿ ಅತೀವ ಸಂತಸ ತಂದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯರವರು ಸಹಕಾರ ವಲಯಗಳ ಪೂರಕ ಅಭಿವೃದ್ಧಿಗಳಿಗಾಗಿ ಸಾಕಷ್ಟು ರೀತಿಯಲ್ಲಿ ನೆರವು ನೀಡಿದ್ದಾರೆ. ಸಹಕಾರ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಲು ಸಹಕಾರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಲ್ಲಿ ದಕ್ಷತೆ ಹೆಚ್ಚಿಸಲು ಸಹಕಾರ ಶಿಕ್ಷಣ ತರಬೇತಿಗೂ ಒತ್ತು ನೀಡಲು ಇಚ್ಚಿಸಿರುವ ಅವರು ಸಹಕಾರ ಸಂಸ್ಥೆಗಳ ನೇಮಕಾತಿಯಲ್ಲಿ ಸಹಕಾರ ಪದವಿ ಅಥವಾ ಡಿಪ್ಲೊಮೋ ಸರ್ಟಿಫಿಕೇಟ್ ಪಡೆದವರಿಗೆ ಆದ್ಯತೆ ನೀಡುವುದಾಗಿ ಹಾಗೂ ಯುವಜನರಲ್ಲಿ ಸಹಕಾರ ಕ್ಷೇತ್ರದ ಅರಿವು ಮೂಡಿಸಲು ಮಾಧ್ಯಮಿಕ, ಪ್ರೌಢಶಾಲಾ ಹಂತದಿಂದಲೇ ಪಠ್ಯಕ್ರಮದಲ್ಲಿ ಸಹಕಾರ ವಿಷಯಗಳನ್ನು ಅಳವಡಿಸಲು ಕ್ರಮಕೈಗೊಳ್ಳುವುದಾಗಿ ಘೋಷಣೆ ಮಾಡಿರುವುದು ಸಹಕಾರಿಗಳಲ್ಲಿ ಸಂತಸದ ಭಾವ ಮೂಡಿರುವುದಲ್ಲದೆ ಮುಖ್ಯಮಂತ್ರಿಗಳ ಘೋಷಣೆಯನ್ನು ಮನಃಪೂರ್ವಕವಾಗಿ ಸ್ವಾಗತಿಸಿದ್ದಾರೆ.

ಸಹಕಾರ ಚಳುವಳಿಯಲ್ಲಿ ಯುವಜನರು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕಾದ ಅಗತ್ಯವೂ ಇದೆ. ರಾಜ್ಯದ ಜನಸಂಖ್ಯೆಗೆ ಹೋಲಿಸಿದ್ದಲ್ಲಿ ಈಗಿರುವ 2,70 ಕೋಟಿ ಸದಸ್ಯತ್ವ ಕಡಿಮೆ ಅನಿಸುತ್ತದೆ. ಸಹಕಾರ ಕ್ಷೇತ್ರದಿಂದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಮುಖ್ಯಮಂತ್ರಿ ಅವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ.

ಸಹಕಾರಿಗಳಾದ ನಾವೆಲ್ಲರೂ ಯುವಜನರು, ಮಹಿಳೆಯರಿಗೆ ಅರಿವು ಜಾಗೃತಿ ಮೂಡಿಸಿ ಅವರೆಲ್ಲರನ್ನು ಸಹಕಾರಿ ಕಕ್ಷೆಗೆ ತರಬೇಕಾಗಿದೆ. ಈ ಕುರಿತು ತೀವ್ರಗತಿಯಲ್ಲಿ ಸದಸ್ಯತ್ವ ಹೆಚ್ಚಳದ ಜೊತೆಗೆ ಈ ಕ್ಷೇತ್ರದ ಮೂಲಕ ಸಿಗುವ ಸೌಲಭ್ಯಗಳನ್ನು ಅವರೆಲ್ಲರಿಗೂ ತಲುಪಿಸುವ ಕೆಲಸಗಳನ್ನು ಮಾಡಬೇಕಾದದ್ದು ನಮ್ಮೆಲ್ಲರ ಜವಾಬ್ದಾರಿಯು ಆಗಿದೆ.

ಸಹಕಾರ ಇನ್ನು ಹಲವಾರು ವಲಯಗಳನ್ನು ವ್ಯಾಪಿಸಬೇಕಾಗಿದೆ. ಇದಕ್ಕೆ ಸಹಕಾರಿಗಳಲ್ಲಿ ಇಚ್ಛಾಶಕ್ತಿ, ನಾಯಕತ್ವ ಅತ್ಯಂತ ಪ್ರಮುಖ ಪಾತ್ರ ವಹಿಸಲಿದೆ. ನಮ್ಮ ದೇಶದ ಯುವಶಕ್ತಿ ಪರಿಣಾಮಕಾರಿಯಾಗಿ ಪಾಲ್ಗೊಂಡರೆ ಹೊಸಬಗೆಯ ಸಹಕಾರ ಸಂಸ್ಥೆಗಳನ್ನು ಕಟ್ಟಿ ಬೆಳೆಸಲು ಸಾಧ್ಯವಾಗಲಿದೆ.

ಈ ನಿಟ್ಟಿನಲ್ಲಿ ನಾವೆಲ್ಲರೂ ಯುವಜನರನ್ನು ಸಹಕಾರಿ ಕಕ್ಷೆಗೆ ಕರೆತರುವ ಕೆಲಸ ಮಾಡುವುದಕ್ಕೆ ಮೊದಲ ಆದ್ಯತೆ ನೀಡಬೇಕಾಗಿದೆ. ಆಗ ಮಾತ್ರ ಮುಂದಿನ ತಲೆಮಾರಿನ ಸಹಕಾರ ಚಳುವಳಿ ಮುನ್ನಡೆಯಲು ಸಾಧ್ಯವಾಗಲಿದೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :

**ಶ್ರೀ ಎಸ್. ಚಂದ್ರಶೇಖರ್**

ಸಂಪಾದಕರು :

**ಪ್ರಜ್ವಲ್ ಕೆ.ಎನ್.**

ಮುಖ್ಯಕಾರ್ಯನಿರ್ವಹಣಾಧಿಕಾರಿ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 126, 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ ಜೆಬಿ ಕಾವಲ್, ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096

ದೂರವಾಣಿ ಸಂಖ್ಯೆ : 080–23564444 / 23464033 / 23464034

ಇ–ಮೇಲ್ : info@ksccsf.org, ksccsfltd@gmail.com, ವೆಬ್ : www.ksccsf.org



72ನೇ ಅಖಿಲ ಭಾರತ ಸಹಕಾರ ಸಪ್ತಾಹಕ್ಕೆ ಆಗಮಿಸಿದ ಮಾಜಿ ಸಹಕಾರ ಸಚಿವರು ಹಾಗೂ ಮಾನ್ಯ ಶಾಸಕರಾದ ಕೆ.ಎನ್. ರಾಜಣ್ಣರವರನ್ನು ಮೈಸೂರಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ಎಸ್. ಚಂದ್ರಶೇಖರ್‌ರವರು ಸ್ವಾಗತಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಲೋಕೇಶ್ ಪಿಯಾ, ಮೈಸೂರು ಮರ್ಚೆಂಟ್ಸ್ ಬ್ಯಾಂಕಿನ ಉಪಾಧ್ಯಕ್ಷರಾದ ಎಂ.ಎನ್ ಮಹೇಶ್, ಜನತಾ ಬಜಾರ್ ಅಧ್ಯಕ್ಷರಾದ ರಮೇಶ್ ರಾಯಪ್ಪ ಹಾಗೂ ನಿರ್ದೇಶಕರಾದ ಮಂಜುನಾಥ್ ರವರು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಜಿಲ್ಲಾ ಸಹಕಾರ ಯೂನಿಯನ್ ನಿ. ಬಾಗಲಕೋಟೆ ಬದಾಮಿ ಹಾಗೂ ಗುಳೇದಗುಡ್ಡ ತಾಲ್ಲೂಕಿನ ಎಲ್ಲಾ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಪತ್ತಿನ ಮಹಾಮಂಡಳದ ನಿರ್ದೇಶಕರಾದ ಹೊನ್ನಯ್ಯ ಹಿರೇಮಠ ಅವರು ಭಾಗವಹಿಸಿದ್ದರು.

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಓ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

## ಬೆಂಗಳೂರಿನಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನೆ

# ಸಹಕಾರಿ ಹೈನುಗಾರಿಕೆಯಲ್ಲಿ ಕರ್ನಾಟಕದ ಸಾಧನೆ ಶ್ಲಾಘನೀಯ : ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಂಗಳೂರು :** ಸಹಕಾರ ಚಳವಳಿಯು ಲಕ್ಷಾಂತರ ಕುಟುಂಬಗಳ ಆರ್ಥಿಕ ಮೂಲಾಧಾರವಾಗಿದೆ. ಸಹಕಾರ ಕ್ಷೇತ್ರ ಗಟ್ಟಿಯಾದರೆ ದೇಶದ, ರಾಜ್ಯದ ಆರ್ಥಿಕ ಹಾಗೂ ಸಾಮಾಜಿಕ ಚೈತನ್ಯ ಹೆಚ್ಚಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಅವರು ಬೆಂಗಳೂರಿನ ಅರಮನೆ ಮೈದಾನದಲ್ಲಿ ದಿನಾಂಕ 14.11.2025 ರಂದು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ವಸತಿ ಸಹಕಾರ ಮಹಾಮಂಡಳ ಹಾಗೂ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಮತ್ತು ಬೆಂಗಳೂರು ನಗರ ಜಿಲ್ಲೆಯ ವಿವಿಧ ಸಹಕಾರ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರಂಭವನ್ನು ಉದ್ಘಾಟಿಸಿ, ಸಹಕಾರಿ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸಿದ ಸಹಕಾರಿಗಳಿಗೆ 'ಸಹಕಾರ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ರಾಜ್ಯದಲ್ಲಿ ಕೆ.ಎಂ.ಎಫ್. ಸಂಸ್ಥೆಯ ಮೂಲಕ ವಾರ್ಷಿಕ 25 ಸಾವಿರ ಕೋಟಿ ರೂ. ವಹಿವಾಟಿನ ಜತೆಗೆ ಪ್ರತಿನಿತ್ಯ ಒಂದು ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಇದು ಸಹಕಾರ ಚಳವಳಿ ಮೂಲಕ ಬೆಳೆದ ಹಾಲು ಮಹಾಮಂಡಳದ ಮಹಾನ್ ಸಾಧನೆ. ಹಾಲು ಉತ್ಪಾದಕರ ಸಂಘಗಳು ಚಳವಳಿ ಸ್ವರೂಪದಲ್ಲಿ ನಡೆದು ಮಧ್ಯವರ್ತಿಗಳ ಹಾವಳಿ ಇಲ್ಲದೆ ರೈತರು ಹಾಲನ್ನು ನೇರ ಸರಬರಾಜು ಮಾಡುತ್ತಿವೆ. ಸಹಕಾರ ಕ್ಷೇತ್ರದಿಂದ ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಿಗೆ ದೊಡ್ಡ ಚೈತನ್ಯ ಸಿಕ್ಕಿದೆ. ಗ್ರಾಮೀಣಾಭಿವೃದ್ಧಿಯಲ್ಲಿ ಸಹಕಾರ ಕ್ಷೇತ್ರದ ಸಾಧನೆ ಮನನೀಯವೆಂದರು.

ಮೊದಲ ಬಾರಿಗೆ ನಾನು ಮುಖ್ಯಮಂತ್ರಿ ಯಾದಾಗ ಹಾಲಿನ ಪ್ರೋತ್ಸಾಹಧನವನ್ನು ಲೀಟರ್‌ಗೆ 3 ರೂ. ಮಾಡಿದ್ದೆ. ಈಗ ಪ್ರೋತ್ಸಾಹ ಧನವನ್ನು ಲೀಟರ್‌ಗೆ 5 ರೂ.ಗೆ ಹೆಚ್ಚಿಸಿ, ಹಾಲು ಉತ್ಪಾದಕರಿಗೆ ಪ್ರತಿನಿತ್ಯ



ಸರಕಾರದಿಂದ 5 ಕೋಟಿ ರೂ. ಸಹಾಯದನ ನೀಡಲಾಗುತ್ತಿದೆ. 40 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಸಹಾಯಧನ ಜಮೆ ಆಗುತ್ತಿದೆ. ಇದಕ್ಕೆಲ್ಲಾ ಹಾಲು ಮಹಾಮಂಡಳ ತಾಯಿ ಬೇರು ಇದ್ದಂತೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಮಾತನಾಡುತ್ತಾ, ಸಹಕಾರ ಕ್ಷೇತ್ರ ಈಗಾಗಲೇ ಜನರ ಬದುಕಿನೊಂದಿಗೆ ಉತ್ತಮ ಬಾಂದವ್ಯವನ್ನೊಂದಿದೆ. ರೈತರ ಆರ್ಥಿಕ ಸ್ವಾವಲಂಬಿ ಬದುಕಿಗೆ ವರದಾನವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಉತ್ತಮ ಸಹಕಾರ ಸಂಸ್ಥೆಗಳಿಗೆ ಪ್ರಶಸ್ತಿ ಪ್ರದಾನ ಮಾಡಿ, ಮಾತನಾಡಿದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಅಧ್ಯಕ್ಷರಾದ ಕೆ. ಷಡಕ್ಷರಿ ಅವರು ಸಿದ್ದರಾಮಯ್ಯನವರು ಸಹಕಾರ ಚಳವಳಿಯ ಬೆಳವಣಿಗೆಗೆ



ಉತ್ತೇಜನ ನೀಡಿದ್ದಾರೆ. ಸಹಕಾರ ಕ್ಷೇತ್ರ ಬೆಳವಣಿಗೆಯಾಗಬೇಕಾದರೆ ವಿವಿಧ ರೀತಿಯ ಸಹಕಾರ ಸಂಘಗಳ ಸ್ಥಾಪನೆಗೆ ಸಹಕಾರಿಗಳು ಪ್ರಯತ್ನಿಸಬೇಕು. ರೈತರಿಗೆ ರೂ. 5 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಹಕಾರ ಕ್ಷೇತ್ರದ ಮೂಲಕ ಸಾಲ ನೀಡಲಾಗುತ್ತಿದೆ. ಮಧ್ಯಮಾವಧಿ, ದೀರ್ಘಾವಧಿ ಸಾಲ ಸೇರಿದಂತೆ ರೈತರ ಉತ್ಪನ್ನಗಳಿಗೆ ಮಾರಾಟ ವ್ಯವಸ್ಥೆ, ಮಹಿಳೆಯರಿಗೆ ವಿಶೇಷ ಯೋಜನೆಗಳನ್ನು ಸರ್ಕಾರ ನೀಡಿದೆ. ಜತೆಗೆ ಮತ್ತೆ ಹೊಸ ಯೋಜನೆಗಳ ಸ್ಥಾಪನೆಗೆ ಸರ್ಕಾರ ನೆರವಾಗಲಿದೆ. ಆದ್ದರಿಂದ ಸಹಕಾರ ಕ್ಷೇತ್ರದ ಬಲಿಷ್ಠ ಬೆಳವಣಿಗೆಯಾದಾಗ ಮಾತ್ರ ಸಮಾಜದಲ್ಲಿ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿ ಸಾಧ್ಯವಿದೆ. ಸಹಕಾರಿಗಳೆಲ್ಲರೂ ಸಹಕಾರ ಕ್ಷೇತ್ರವನ್ನು ಪರಿಣಾಮಕಾರಿಯಾಗಿ ಕಟ್ಟಲು ಶ್ರಮಿಸೋಣವೆಂದರು.

ಸಹಕಾರ ವಾರಪತ್ರಿಕೆಯ ವಿಶೇಷ ಸಂಚಿಕೆ ಬಿಡುಗಡೆ ಮಾಡಿದ ಶಾಸಕರು ಹಾಗೂ ಕರ್ನಾಟಕ ರಾಜ್ಯ ವಸತಿ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಎಸ್.ಟಿ. ಸೋಮಶೇಖರ್ ಅವರು ಮಾತನಾಡಿ, ಸಹಕಾರ ಕ್ಷೇತ್ರದ ಬೆಳವಣಿಗೆಗೆ ಅವಿರತವಾಗಿ ಶ್ರಮಿಸಿದ ಸಹಕಾರಿಗಳಿಗೆ ಸಹಕಾರ ರತ್ನ ನೀಡುತ್ತಿದ್ದು, ಸಹಕಾರ ಕ್ಷೇತ್ರದ ಬೆಳವಣಿಗೆಗೆ ಪ್ರೋತ್ಸಾಹ ಹಾಗೂ ಪ್ರೇರಣೆ ನೀಡಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರುಗಳು ಸಹಕಾರ ಇಲಾಖೆಯ ಕಾರ್ಯದರ್ಶಿಗಳಾದ ಎಸ್.ಬಿ. ಶೆಟ್ಟಣ್ಣನವರ್, ಸಹಕಾರ ಸಂಘಗಳ ನಿಬಂಧಕರಾದ ಟಿ.ಹೆಚ್.ಎಂ. ಕುಮಾರ್, ನಬಾರ್ಡ್ ಮುಖ್ಯ ಪ್ರಬಂಧಕರಾದ ಡಾ. ಸುರೇಂದ್ರ ಬಾಬು ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಎಂ.ಡಿ. ವಿಜಯದೇವ್ ಮತ್ತಿತರರು ಉಪಸ್ಥಿತರಿದ್ದರು.





## ಸಾಲು ಮರದ ತಿಮ್ಮಕ್ಕ

ಕರ್ನಾಟಕ ರಾಜ್ಯದ ಒಬ್ಬ ಭಾರತೀಯ ಪರಿಸರವಾದಿಯಾದ 114 ವರ್ಷದ ಸಾಲುಮರದ ತಿಮ್ಮಕ್ಕ ರವರು 2025ರ ನವೆಂಬರ್–14ರಂದು ವಿಧಿವಶರಾಗಿದ್ದಾರೆ. ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಆಡಳಿತಮಂಡಳಿಯು ವಿಷಾದ ವ್ಯಕ್ತಪಡಿಸಿದೆ.

# ಚಾಮರಾಜನಗರದಲ್ಲಿ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ

## ಸಹಕಾರ ಸಂಘಗಳ ನೇಮಕಾತಿಯಲ್ಲಿ ಸಹಕಾರಿ ಪದವಿ/ಡಿಪ್ಲೊಮಾ ಪಡೆದವರಿಗೆ ಆದ್ಯತೆ ಮಾಧ್ಯಮಿಕ, ಪ್ರೌಢಶಾಲಾ ಶಿಕ್ಷಣದ ಪಠ್ಯಕ್ರಮದಲ್ಲಿ ಸಹಕಾರ ವಿಷಯ ಸೇರ್ಪಡೆ – ಮುಖ್ಯಮಂತ್ರಿ ಸಿದ್ದರಾಮಯ್ಯ

ಜಾನಪದ ಕಲೆಗಳ ನಾಡು ಚಾಮರಾಜನಗರದಲ್ಲಿ ನವೆಂಬರ್ 20 ರಂದು 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ಬಹಳ ವಿಜೃಂಭಣೆಯಿಂದ ನಡೆಯಿತು. ಮೈಸೂರು ಭಾಗದ ವಿವಿಧ ಜಿಲ್ಲೆಗಳ ಸಹಕಾರ ಸಂಸ್ಥೆಗಳ ಆಡಳಿತ ಮಂಡಳಿ ಪದಾಧಿಕಾರಿಗಳು, ನಿರ್ದೇಶಕರುಗಳು, ಸದಸ್ಯರು ಮತ್ತು ಸಾರ್ವಜನಿಕರು ಸೇರಿದಂತೆ ಮೂವತ್ತು ಸಾವಿರಕ್ಕೂ ಅಧಿಕ ಜನರು ಕಾರ್ಯಕ್ರಮದಲ್ಲಿ ಭಾಗವಹಿಸಿ ಸಹಕಾರ ಸಪ್ತಾಹ ಸಮಾರೊಪ ಸಮಾರಂಭವನ್ನು ಯಶಸ್ವಿಗೊಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರುಗಳಾದ ಕೆ. ವೆಂಕಟೇಶ್, ಡಾ. ಎಚ್.ಸಿ. ಮಹದೇವಪ್ಪ, ಸಂಸದ ಸುನಿಲ್ ಬೋಸ್, ನಿಕಟಪೂರ್ವ ಸಹಕಾರ ಸಚಿವರು ಹಾಗೂ ಶಾಸಕರಾದ ಕೆ.ಎನ್. ರಾಜಣ್ಣ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಟಿ. ದೇವೇಗೌಡರು, ಜಿಲ್ಲೆಯ ಶಾಸಕರುಗಳು, ಜಿಲ್ಲಾಧಿಕಾರಿ ಶಿಲ್ಪಾನಾಗ್, ಸಹಕಾರ ಇಲಾಖೆ ಅಧಿಕಾರಿಗಳು ಸೇರಿದಂತೆ ಜಿಲ್ಲೆಯ ಹಿರಿಯ ಸಹಕಾರಿ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

**ಚಾಮರಾಜನಗರ** : ಸಹಕಾರ ಸಂಘ/ಸಂಸ್ಥೆಗಳಲ್ಲಿ ನೇಮಕಾತಿ ಮಾಡುವ ಸಂದರ್ಭದಲ್ಲಿ ಸಹಕಾರ ಪದವಿ/ಡಿಪ್ಲೊಮಾ ಸರ್ಟಿಫಿಕೇಟ್ ಪಡೆದವರಿಗೆ ಆದ್ಯತೆ ನೀಡಲಾಗುವುದು ಮತ್ತು ಮಾಧ್ಯಮಿಕ ಪ್ರೌಢಶಾಲಾ ಶಿಕ್ಷಣದ ಪಠ್ಯಕ್ರಮದಲ್ಲಿ ಸಹಕಾರ ವಿಷಯಗಳನ್ನು ಸೇರ್ಪಡೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಣೆ ಮಾಡಿದರು.




ಚಾಮರಾಜನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಹಾಲು ಮಹಾಮಂಡಳಿ, ಕರ್ನಾಟಕ ರಾಜ್ಯ ಸಹಕಾರ ಮೀನುಗಾರರ ಮಹಾಮಂಡಳ, ಮೈಸೂರು–ಚಾಮರಾಜನಗರ ಜಿಲ್ಲೆಗಳ ಹಾಲು ಒಕ್ಕೂಟಗಳು ಹಾಗೂ ಜಿಲ್ಲಾ ಸಹಕಾರ ಯೂನಿಯನ್‌ಗಳು, ಎಲ್ಲ ರೀತಿಯ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ–2025ರ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಸಹಕಾರ ಸಂಘಗಳಲ್ಲಿ ಆರ್ಥಿಕವಾಗಿ ಅಬಲರಾದ ಜನರು ಸದಸ್ಯರಾಗಿ ಸೌಲಭ್ಯಗಳನ್ನು ಪಡೆದು ಸ್ವಾವಲಂಬಿಗಳಾಗಬೇಕು. ಈ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ/ಪಂಗದವರು ಸಹಕಾರ ಸಂಘಗಳಲ್ಲಿ ಸದಸ್ಯರಾಗಲು ಸರ್ಕಾರವೇ ಷೇರು ಹಣ ನೀಡುತ್ತದೆ ಎಂದರು.

ರಾಜ್ಯ ಸರ್ಕಾರ ಸಹಕಾರಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡಿದ್ದರಿಂದ ಶಾಲಾ ಮಕ್ಕಳಿಗೆ ಕ್ಷೀರಭಾಗ್ಯ ಯೋಜನೆ ಅಡಿಯಲ್ಲಿ ಉಚಿತ ಹಾಲು ವಿತರಣೆ ಮೂಲಕ ಅಪೌಷ್ಠಿಕತೆ ಹೋಗಲಾಡಿಸಿದೆ. ಕ್ಷೀರಧಾರೆ ಮೂಲಕ ಹಾಲು ಉತ್ಪಾದಕರಿಗೆ ಪ್ರತಿಲೀಟರ್ ಹಾಲಿಗೆ 5 ರೂ. ಗಳ ಪ್ರೋತಾಹಧನ ನೀಡಿ ಆರ್ಥಿಕ ಸ್ವಾವಲಂಬನೆಗೆ ನೆರವಾಗುತ್ತಿದೆ ಎಂದರು.

ವಿವಿಧ ಸಹಕಾರ ವಲಯಗಳ ಬೆಳವಣಿಗೆಯಿಂದ ಆರ್ಥಿಕ ಬೆಳವಣಿಗೆಯೂ ಸಾಧ್ಯವಾಗುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯದ ಜನತೆ ಸಹಕಾರ ಸಂಘಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು. ಸಮಾಜದಲ್ಲಿ ಅಸಮಾನತೆ ನಿವಾರಣೆಯಾಗಬೇಕು. ಎಲ್ಲರಿಗೂ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ರಾಜಕೀಯ ಶಕ್ತಿ ಬರಬೇಕು. ಜಾತಿ ವ್ಯವಸ್ಥೆ ಹೋಗಲಾಡಿಸಬೇಕು ಎಂದು ಸಿದ್ದರಾಮಯ್ಯ ಅವರು ತಿಳಿಸಿದರು. ಪಶುಸಂಗೋಪನೆ, ರೇಷ್ಮೆ ಮತ್ತು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ರೈತರು, ಮಹಿಳೆಯರು, ಬಡವರು, ದೀನದಲಿತರ ಉದ್ಧಾರಕ್ಕಾಗಿ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದ್ದಾರೆ ಎಂದು ತಿಳಿಸಿದರು.

ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ ಅವರು ಮಾತನಾಡಿ, ಸಹಕಾರ ಚಳವಳಿ ಮತ್ತು ಭಾರತದ ಸಂವಿಧಾನವು ಶೋಷಿತರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಸಮಾನತೆಗೆ ಕಾರಣವಾಗಿವೆ ಎಂದರು.

ಗ್ರಾಮೀಣ ಜನರ ಸ್ವಾವಲಂಬನೆಗೆ ಮಹಾತ್ಮಗಾಂಧಿ, ಪಂಡಿತ್ ಜವಾಹರಲಾಲ್ ನೆಹರೂ ರವರ ಚಿಂತನೆಗಳಿಂದ ಪಂಚಾಯಿತಿ ಸಂಸ್ಥೆಗಳಿಗೆ ಹಾಗೂ ಸಹಕಾರ ಸಂಸ್ಥೆಗಳಿಗೆ ರಾಜ್ಯಾಂಗ ಬದ್ಧ

ಸಂಸ್ಥೆಗಳನ್ನಾಗಿಸಿವೆ ಎಂದರು. ಸಹಕಾರ ಸಂಸ್ಥೆಗಳಲ್ಲಿ ಹಿಂದುಳಿದ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಸ್ವಾವಲಂಬನೆ ಮತ್ತು ಭಾಗವಹಿಸುವಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಸರ್ಕಾರ ಮೀಸಲಾತಿಗಳನ್ನು ಕಲ್ಪಿಸಿ ಸಮಾನತೆಯ ಅವಕಾಶಗಳನ್ನು ನೀಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ನಿಕಟಪೂರ್ವ ಸಹಕಾರ ಸಚಿವರು ಹಾಗೂ ಶಾಸಕರಾದ ಕೆ.ಎನ್. ರಾಜಣ್ಣನವರು ಮಾತನಾಡಿ, ಗ್ರಾಮ ಪಂಚಾಯ್ತಿಗಳಲ್ಲಿರುವಂತೆ ಸರ್ಕಾರದ ಅನುದಾನ ಪಡೆದಿರುವ ಸಹಕಾರ ಸಂಸ್ಥೆಗಳಲ್ಲಿ ಅಧ್ಯಕ್ಷರು-ಉಪಾಧ್ಯಕ್ಷರುಗಳಿಗೆ ಮೀಸಲಾತಿ ಜ್ಯಾರಿಗೆ ತರಲಾಗಿದೆ. ಶೀಘ್ರವೇ ನಿಯಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು ಎಂದರು.

2018ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರೈತರ 50 ಸಾವಿರ ರೂ.ಗಳ ಸಾಲ ಮನ್ನಾ ಮಾಡಿದ್ದರು. ಹಾಗೆಯೇ ಈ ಹಿಂದೆ ಭೂರಹಿತರು ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಸಾಲ ಪಡೆದಿದ್ದ ಅಂದಾಜು 2 ಸಾವಿರ ಕೋಟಿ ರೂ.ಗಳನ್ನು ಸಹ ಮನ್ನಾ ಮಾಡಿದ್ದರು. ಸರ್ಕಾರವು ಕೈಗೊಂಡ ಇಂತಹ ಜನಪರ ಕಾರ್ಯಕ್ರಮಗಳು ಜನರಿಗೆ ತಲುಪಬೇಕು ಎಂದರು. ಸಹಕಾರ ಆಂದೋಲನ ತಳಮಟ್ಟದ ಜನರಿಗೆ ತಲುಪಬೇಕು. ಸಹಕಾರ ತತ್ವಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು. ಸಹಕಾರ ಸಂಘಗಳಲ್ಲಿ ದೊರಕುವ ಸೌಲಭ್ಯಗಳನ್ನು ಪಡೆದು ಸಂತೃಪ್ತ ಜೀವನ ನಡೆಸಬೇಕು ಎಂದು ನೆರೆದಿದ್ದ ಸಹಕಾರಿಗಳಿಗೆ ತಿಳಿಸಿದರು.

ಯಾವುದೇ ಸಹಕಾರ ಸಂಸ್ಥೆಗಳಲ್ಲಿ ನೇಮಕಾತಿ ಸಂದರ್ಭದಲ್ಲಿ ಸಹಕಾರಿ ಪದವಿ/ಡಿಪ್ಲೊಮಾ ಸರ್ಟಿಫಿಕೇಟ್ ಪಡೆದವರಿಗೆ ಆದ್ಯತೆ ನೀಡಬೇಕು ಹಾಗೂ ಮಾಧ್ಯಮಿಕ, ಪ್ರೌಢಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳು ಸಹಕಾರ ವಿಷಯವನ್ನು ಕಲಿಯಲು ಪಠ್ಯಕ್ರಮದಲ್ಲಿ ಅಳವಡಿಸಬೇಕು ಎಂದು ಮುಖ್ಯಮಂತ್ರಿ ಅವರಲ್ಲಿ ಕೆ.ಎನ್. ರಾಜಣ್ಣ ಅವರು ಮನವಿ ಮಾಡಿದರು. ಸಹಕಾರ ಆಂದೋಲನ ಬಗ್ಗೆ ಜನರಲ್ಲಿ ಅರಿವು ಹಾಗೂ ಸದಸ್ಯತ್ವ ನೋಂದಣಿಗೆ ಆದ್ಯತೆ ನೀಡಬೇಕು ಎಂದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಟಿ. ದೇವೇಗೌಡರವರು ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ಪ್ರಾಮಾಣಿಕತೆ ಜೊತೆಗೆ ತ್ಯಾಗ ಮನೋಭಾವವೂ ಅಗತ್ಯ. ಬಡಜನರ ಕಲ್ಯಾಣಕ್ಕೆ ಆದ್ಯತೆ ನೀಡಬೇಕು. ಸಹಕಾರ ಅಭಿವೃದ್ಧಿಗೆ ಒತ್ತು ನೀಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಕೈಬಲಪಡಿಸಬೇಕು ಎಂದು ಸಹಕಾರಿಗಳಲ್ಲಿ ಮನವಿ ಮಾಡಿದರು.

ಸಹಕಾರ ಕ್ಷೇತ್ರ ಸೇವಾ ಕ್ಷೇತ್ರವಾಗಿದ್ದು, ಎಲ್ಲ ವಲಯಗಳ ಬಲವರ್ಧನೆಗೆ ನಾವೆಲ್ಲರೂ ಬದ್ಧತೆಯಿಂದ ಕಾರ್ಯನಿರ್ವಹಿಸಿದರೆ ಮತ್ತಷ್ಟು ಆರ್ಥಿಕ ಪ್ರಗತಿ ಸಾಧ್ಯವಾಗಲಿದೆ ಎಂದರು.

ಸಂಸದ ಸುನಿಲ್ ಬೋಸ್ ಅವರು ಮಾತನಾಡಿ, ಗ್ರಾಮೀಣ ಮಹಿಳೆಯರು ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡು ಆರ್ಥಿಕ ಸ್ವಾವಲಂಬಿಗಳಾಗುತ್ತಿದ್ದಾರೆ. ಹಿಂದುಳಿದ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರಿಗೆ ಸಹಕಾರ ಸಂಸ್ಥೆಗಳಲ್ಲಿ ಹೆಚ್ಚಿನ ಸ್ಥಾನಮಾನಗಳು ಸಿಗಬೇಕು ಎಂದರು. ಶಾಸಕರು ಹಾಗೂ 2025ರ ಸಾಲಿನ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಸಿ. ಪುಟ್ಟರಂಗಶೆಟ್ಟಿ ಅವರು ಮಾತನಾಡುತ್ತಾ, ಸಹಕಾರ ಕ್ಷೇತ್ರದಿಂದ ಗ್ರಾಮೀಣ ಜನರ ಸ್ವಾವಲಂಬನೆ, ಸರ್ಕಾರದ ಹಲವು ರೀತಿಯ ನೆರವುಗಳನ್ನು ಸ್ವಾಗತಿಸಿದ ಅವರು ಚಾಮರಾಜನಗರ ಜಿಲ್ಲೆಗೆ ಪ್ರತ್ಯೇಕ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕು ಸ್ಥಾಪನೆಗೆ ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ ರವರು ಸಹಕಾರ ಜಾಥಾಗೆ ಚಾಲನೆ ನೀಡಿದರು. ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಹಾಗೂ ಗಣ್ಯರು ಸಹಕಾರ ಧ್ವಜಾರೋಹಣ ನೆರವೇರಿಸಿದರು. ಸಹಕಾರಿ ಪಿತಾಮಹರಿಗೆ ಪುಷ್ಪಾರ್ಚನೆ ಸಲ್ಲಿಸಿದರು ಹಾಗೂ ನಂದಿನಿ ಸಂಕೇತ ಗೋವಿಗೆ ಪೂಜೆ ಸಲ್ಲಿಸಿದರು.

ಚಾಮರಾಜನಗರ ಜಿಲ್ಲಾ ಸಹಕಾರ ಯೂನಿಯನ್ನಿನ ಅಧ್ಯಕ್ಷರು ಹಾಗೂ 2025ರ ಸಹಕಾರ ರತ್ನ ಪುರಸ್ಕೃತರಾದ ಎಚ್.ಎಸ್. ನಂಜುಂಡ ಪ್ರಸಾದ್ ಅವರು ಅತಿಥಿಗಳನ್ನು ಸ್ವಾಗತಿಸಿದರು.

ವೇದಿಕೆಯ ಮೇಲೆ ಶಾಸಕರುಗಳಾದ ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್‌ಪ್ರಸಾದ್, ಎಂ.ಆರ್. ಮಂಜುನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಕೆ. ವಿವೇಕಾನಂದ, ಕಾವೇರಿ ಅಚ್ಚುಕಟ್ಟು ಪ್ರಾಧಿಕಾರ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚಾಮರಾಜನಗರ ನಗರಾಭಿವೃದ್ಧಿ ಅಧ್ಯಕ್ಷ ಮಹಮದ್ ಅಸ್ಗರ್, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ. ಚಂದ್ರು, ಚಾಮರಾಜನಗರ ಹಾಲು ಒಕ್ಕೂಟದ ಅಧ್ಯಕ್ಷ ಎಂ. ನಂಜುಂಡಸ್ವಾಮಿ, ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಎನ್. ಗಂಗಣ್ಣ, ಅಭಿಷೇಕ್ ಪಾಟೀಲ್, ಸಹಕಾರ ಇಲಾಖೆ ಕಾರ್ಯದರ್ಶಿ ಎಸ್.ಬಿ. ಶೆಟ್ಟಣ್ಣನವರ, ಸಹಕಾರ ಸಂಘಗಳ ನಿಬಂಧಕರಾದ ಟಿ.ಎಚ್.ಎಂ. ಕುಮಾರ್, ಜಿಲ್ಲಾ ಪಂಚಾಯ್ತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಮೋನಾರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಕವಿತಾ, ಕರ್ನಾಟಕ ಹಾಲು ಮಹಾಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಬಿ. ಶಿವಸ್ವಾಮಿ, ಅಪರ ನಿಬಂಧಕರಾದ ಎಚ್. ಬಾಲಶೇಖರ್, ಮೈಸೂರು-ಚಾಮರಾಜನಗರ ಡಿಸಿಸಿ ಬ್ಯಾಂಕಿನ ಆಡಳಿತಾಧಿಕಾರಿ ಕೆ.ಎಂ. ಆಶಾ, ಸಹಕಾರಿ ಮಹಾಮಂಡಳ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್, ಕಾರ್ಯದರ್ಶಿ ಅಶ್ವತ್ಥನಾರಾಯಣ, ಮೈ-ಚಾ ಡಿಸಿಸಿ ಬ್ಯಾಂಕ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಆರ್.ಜೆ. ಕಾಂತರಾಜು, ಮೈಸೂರು ಪ್ರಾಂತ್ಯ ಜಂಟಿ ನಿಬಂಧಕರಾದ ಪ್ರಸಾದ್‌ರೆಡ್ಡಿ, ಚಾಮುಲ್ ವ್ಯವಸ್ಥಾಪಕ ನಿರ್ದೇಶಕರಾದ ಕೆ. ರಾಜಕುಮಾರ್, ಉಪನಿಬಂಧಕರುಗಳಾದ ಬೀರೇಂದ್ರ, ಜ್ಯೋತಿ ಅರಸ್, ಸಹಕಾರ ಮಹಾಮಂಡಳ ನೋಡಲ್ ಅಧಿಕಾರಿ ಎಂ. ಮಲ್ಲರಾಜ್ ಅವರುಗಳು ಉಪಸ್ಥಿತರಿದ್ದರು.

ಹೈನುಗಾರಿಕೆ ವಿಷಯ ತಜ್ಞರಾದ ಡಾ. ಕೆ.ಪಿ. ರಮೇಶ್ ಅವರು ಸಹಕಾರ ಸಪ್ತಾಹದ ದಿನದ ವಿಷಯ ಹಾಗೂ ಹೈನುಗಾರಿಕೆಯ ಮಹತ್ವದ ಬಗ್ಗೆ ಉಪನ್ಯಾಸ ನೀಡಿದರು.

## ರಾಯಚೂರಿನಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಪ್ರತಿಯೊಬ್ಬರು ಸಹಕಾರಿ ವಲಯದಲ್ಲಿ ಭಾಗಿದಾರರಾಗಲು ಸಚಿವ ಎನ್.ಎಸ್.ಬೋಸರಾಜು ಸಲಹೆ



**ರಾಯಚೂರು :** ಎಲ್ಲರನ್ನು ಭಾಗಿದಾರನ್ನಾಗಿಸಿ ಸಹಕಾರ ಕ್ಷೇತ್ರವನ್ನು ಇನ್ನಷ್ಟು ವೃದ್ಧಿಸುವ ಕಾರ್ಯವಾಗಬೇಕಾಗಿದ್ದು ಆ ನಿಟ್ಟಿನಲ್ಲಿ ಸಹಕಾರಿಗಳು ಶ್ರಮಿಸಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಅಭಿಪ್ರಾಯಪಟ್ಟರು.

ಸ್ಥಳೀಯ ಕೃಷಿ ವಿಜ್ಞಾನಗಳ ವಿವಿಯ ಪ್ರೇಕ್ಷಾಗೃಹದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಕರ್ನಾಟಕ ರಾಜ್ಯ ಬಸವೇಶ್ವರ ಸುದ್ದಿ ಮಾಧ್ಯಮ ಸಹಕಾರ ಮಹಾಮಂಡಳ, ಜಿಲ್ಲಾ ಸಹಕಾರ ಒಕ್ಕೂಟ, ಸಹಕಾರ ಇಲಾಖೆ, ರಾಯಚೂರು–ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಜಿಲ್ಲಾ ಸೌಹಾರ್ದ ಸಹಕಾರ ಒಕ್ಕೂಟ, ರಾಯಚೂರು ಕೊಪ್ಪಳ ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ಜಿಲ್ಲೆಯ ಸೌಹಾರ್ದ ಸಹಕಾರ ಸಂಘಗಳು, ಜಿಲ್ಲೆಯ ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಪತ್ತಿನ ಸಹಕಾರ ಸಂಘಗಳು, ಜಿಲ್ಲೆಯ ತಾಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘಗಳು ಜಿಲ್ಲೆಯ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳು, ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ–2025ರ ಎರಡನೇ ದಿನದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.



## ಮಂಗಳೂರಿನಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರಿ ಕ್ಷೇತ್ರ ಜನರ ಸ್ವಾವಲಂಬಿ ಬದುಕಿಗೆ ಪೂರಕ : ಯು.ಟಿ. ಖಾದರ್



**ಮಂಗಳೂರು** : ಅಬಲ ವರ್ಗದವರಿಗೆ ಶಕ್ತಿ ಹಾಗೂ ಧ್ವನಿಯಾಗುವುದು ಸಹಕಾರಿ ಕ್ಷೇತ್ರದ ಗುರಿಯಾಗಿದೆ. ಸಹಕಾರಿ ಕ್ಷೇತ್ರದಿಂದ ಮಾತ್ರ ಸ್ವಾವಲಂಬಿ, ಬಲಿಷ್ಠ ಬದುಕು ಸಾಧ್ಯವಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದರು.

ದೇಶದ ಆತ್ಮ ಗ್ರಾಮೀಣ ಮಟ್ಟದಲ್ಲಿದೆ. ಹಿಂದಿನಿಂದಲೂ ಎಲ್ಲರೂ ಕೈ ಜೋಡಿಸುವ ಮೂಲಕ ಸಹಕಾರಿ ಶಕ್ತಿಯನ್ನು ಇನ್ನಷ್ಟು ಬಲಗೊಳಿಸಿದ್ದಾರೆ. ಎಲ್ಲ ಸಹಕಾರಿಗಳೂ ದೇಶಕ್ಕೆ ಕೊಡುಗೆ ನೀಡಿದ್ದಾರೆ. ಇದಕ್ಕೆ ಕರಾವಳಿ ಕೂಡ ಹೊರತಾಗಿಲ್ಲ ಎಂದರು.

ಅವರು ಮಂಗಳೂರಿನ ಕರಾವಳಿ ಉತ್ಸವ ಮೈದಾನದಲ್ಲಿ ಭಾನುವಾರ ಏರ್ಪಡಿಸಿದ್ದ "72ನೇ ಅಖಿಲ ಭಾರತ ಸಹಕಾರ ಸಪ್ತಾಹ–2025" ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಹಿಂದೆ ಹೆಂಚು, ಬೀಡಿ ಉದ್ಯಮದಲ್ಲಿ ದುಡಿದು ಸಾಕಷ್ಟು ಮಹಿಳೆಯರು ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಕುಟುಂಬವನ್ನು ಪೋಷಿಸಿ ಸ್ವಾಭಿಮಾನಿ ಬದುಕು ಕಟ್ಟಿಕೊಂಡಿದ್ದಾರೆ. ರಾಜ್ಯ ಸರ್ಕಾರ ಕೂಡ ಮಹಿಳೆಯರ ಹೆಸರಲ್ಲಿ ವಿವಿಧ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಮಕ್ಕಳನ್ನು ಸಾಧ್ಯವಾದಷ್ಟು ಮಟ್ಟಿಗೆ ರಾಜಕೀಯದಲ್ಲಿ ಮುಂದೆ ಬರುವಂತೆ ಮಹಿಳೆಯರು ಪ್ರೋತ್ಸಾಹ ನೀಡಬೇಕು. ಜವಳಿ ಉದ್ದಿಮೆ ಸಹಿತ ಮಹಿಳೆಯರು ನಡೆಸುವ ಸ್ವಸಹಾಯ ಉತ್ಪನ್ನಗಳಿಗೆ ದೊಡ್ಡ ಪ್ರಮಾಣದಲ್ಲಿ ಮಾರುಕಟ್ಟೆ ವ್ಯವಸ್ಥೆಯಾಗಲಿ ಎಂದು ಅವರು ಹಾರೈಸಿದರು. ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಮಾತನಾಡಿ, ಸಹಕಾರಿ ಕ್ಷೇತ್ರದಲ್ಲೂ ಮಹಿಳೆಯರಿಗೆ ಶೇ.50ರ ಮೀಸಲಾತಿ ಸಿಗುವಂತಾಗಬೇಕು. ಆಗ ಮಾತ್ರ ಸಹಕಾರಿ ಕ್ಷೇತ್ರದ ಬಲಿಷ್ಠ ಬೆಲವಣಿಗೆಗೆ ಪೂರಕ ವಾತಾವರಣ ನಿರ್ಮಾಣವಾಗಲಿದೆ. ರಾಜ್ಯ ಸರ್ಕಾರ 37 ಲಕ್ಷ ರೈತರಿಗೆ 28 ಸಾವಿರ ಕೋಟಿ ರೂ. ಸಾಲದ ಗುರಿ ಹೊಂದಿದ್ದು ಈಗಾಗಲೇ 16 ಲಕ್ಷ ರೈತರಿಗೆ 15 ಸಾವಿರ ಕೋಟಿ ರೂ. ಸಾಲವನ್ನು ಶೂನ್ಯ ಬಡ್ಡಿ ದರದಲ್ಲಿ ನೀಡಿದೆ. ಈ ಬಾರಿ 148 ಲಕ್ಷ ಟನ್ ಆಹಾರಧಾನ್ಯ ಉತ್ಪಾದನೆಯ ಗುರಿ ಹೊಂದಲಾಗಿದ್ದು, 2 ಲಕ್ಷ ಹೆಕ್ಟೇರ್ ಬಿತ್ತನೆ ಕೈಗೊಳ್ಳಲಾಗಿದೆ ಎಂದರು.

ಉತ್ತಮ ಸ್ವಸಹಾಯ ಸಂಘಗಳಿಗೆ ಸನ್ಮಾನಿಸಿ, ಮಾತನಾಡಿದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷರಾದ ಜಿ.ಟಿ. ದೇವೇಗೌಡ, ಕರಾವಳಿಯಲ್ಲಿ ಪ್ರತಿ ಮನೆ ಮನೆಗಳಲ್ಲಿ ಸಹಕಾರ ತತ್ವ ಸಾಕಾರಗೊಂಡಿದೆ. ಸಹಕಾರ ಸಂಘಗಳು ಬೆಳೆ ಸಾಲ ಮಾತ್ರವಲ್ಲ ಬೀದಿ ವ್ಯಾಪಾರ, ಶಿಕ್ಷಣ ಸೇರಿದಂತೆ ವಿವಿಧ ರಂಗಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುತ್ತಿವೆ ಎಂದರು.

ಬೆಂಗಳೂರಿನ ನಬಾರ್ಡ್ ಮುಖ್ಯಮಹಾಪ್ರಬಂಧಕ ಡಾ. ಸುರೇಂದ್ರ ಬಾಬು ಮಾತನಾಡಿ, ಅಂತಾರಾಷ್ಟ್ರೀಯ ಸಹಕಾರ ಮೈತ್ರ ಸಂಸ್ಥೆಯು 2205ನ್ನು ಅಂತಾರಾಷ್ಟ್ರೀಯ ಸಹಕಾರ ವರ್ಷವಾಗಿ ಆಚರಿಸಲು ಕಾರ್ಯಕ್ರಮ ರೂಪಿಸಿದೆ.

ಸಹಕಾರ ಕ್ಷೇತ್ರದ ಮೂಲಕ ಗ್ರಾಮೀಣ ಭಾಗದ ಜನರನ್ನು ಸದೃಢಗೊಳಿಸುವುದು ಇದರ ಮುಖ್ಯ ಉದ್ದೇಶ ಎಂದರು. ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಅಧ್ಯಕ್ಷರು ಹಾಗೂ ದ.ಕ. ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷರೂ ಆದ ಎಂ.ಎನ್ ರಾಜೇಂದ್ರ ಕುಮಾರ್ ವಹಿಸಿ ಮಾತನಾಡಿ, ವಾಣಿಜ್ಯ ಬ್ಯಾಂಕ್‌ಗಳು ಸಾಲ ನೀಡಲು ನಿರಾಕರಿಸಿದಾಗ ರೈತರ ಕೈಹಿಡಿದಿದ್ದು ಸಹಕಾರಿ ಸಂಘಗಳು. ಸಹಕಾರಿ ಬ್ಯಾಂಕ್‌ಗಳು ಅರ್ಧ ದಿನದಲ್ಲಿ ಸಾಲ ಮಂಜೂರುಗೊಳಿಸುವ ಮೂಲಕ ರೈತರಿಗೆ, ಮಹಿಳೆಯರಿಗೆ ಹಾಗೂ ಸಾರ್ವಜನಿಕರಿಗೆ ನೆರವಾಗುತ್ತಿವೆ. ಅವಿಭಜಿತ ದ.ಕ. ಜಿಲ್ಲೆ ಬ್ಯಾಂಕ್‌ಗಳ ತವರು. ಆದರೆ ಈಗ ಬಹುತೇಕ ಬ್ಯಾಂಕ್‌ಗಳು ವಿಲೀನಗೊಂಡಿದ್ದು, ಕನ್ನಡೇತರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇಂತಹ ತೊಡಕು ಸಹಕಾರಿ ಬ್ಯಾಂಕ್‌ಗಳಲ್ಲಿ ಇಲ್ಲ. ಸಹಕಾರಿ ಬ್ಯಾಂಕ್‌ಗಳು ವಿಕಸನಗೊಂಡು ಪ್ರತಿ ಹಳ್ಳಿಗಳಲ್ಲಿ ಸೇವೆ ನೀಡುತ್ತಿವೆ. ಇದರಿಂದಾಗಿ ಗ್ರಾಮೀಣ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಿದಂತಾಗಿದೆ ಎಂದರು. ಕಾರ್ಯಕ್ರಮದಲ್ಲಿ ಶಾಸಕರಾದ

12ನೇ ಪುಟಕ್ಕೆ...

## ಹಾವೇರಿಯಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರಿ ಸಂಸ್ಥೆಗಳು ಪ್ರಜಾಪ್ರಭುತ್ವದ ಪಾಠ ಶಾಲೆಗಳು : ಸಚಿವ ಎಚ್.ಕೆ. ಪಾಟೀಲ



**ಹಾವೇರಿ :** ಸಹಕಾರಿ ಸಂಸ್ಥೆಗಳು ಪ್ರಜಾಪಭುತ್ವದ ಪಾಠ ಶಾಲೆಗಳು, ನೈಜ ಪ್ರಜಾಪ್ರಭುತ್ವ ವ್ಯವಸ್ಥೆಯ ಸಹಕಾರಿ ಸಂಸ್ಥೆಗಳಲ್ಲಿ ಕಾಣಬಹುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ಅವರು ಹೇಳಿದರು.

ನಗರದ ರಜನಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ, ಕರ್ನಾಟಕ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಉಣ್ಣೆ ಕೈಮಗ್ಗ ನೇಕಾರರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮಹಿಳಾ ಮಹಾಮಂಡಳ, ಧಾರವಾಡ ದಿ.ಕರ್ನಾಟಕ ಸೆಂಟ್ರಲ್ ಕೋ-ಆಪರೇಟಿವ್ ಬ್ಯಾಂಕ್, ಹಾವೇರಿ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ, ಹಾವೇರಿ ಜಿಲ್ಲಾ ಸಹಕಾರ ಯೂನಿಯನ್, ಬೆಳಗಾವಿ ಪ್ರಾಂತದ ಎಲ್ಲ ಪಟ್ಟಣ ಸಹಕಾರ ಬ್ಯಾಂಕುಗಳು, ಪತ್ತಿನ ಸಹಕಾರ ಸಂಘಗಳು, ತಾಲೂಕು ಒಕ್ಕುಲತನ ಹುಟ್ಟುವಳಿ ಮಾರಾಟ ಸಹಕಾರ ಸಂಘಗಳು, ತಾಲೂಕು ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಹಾಲು ಉತ್ಪಾದಕರ ಸಹಕಾರ ಸಂಘಗಳು, ಗ್ರಾಹಕರ ಸಂಘಗಳು ಮತ್ತು ಇತರೆ ಎಲ್ಲ ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ -2025 ಕಾರ್ಯಕ್ರಮ ಉದ್ಘಾಟಿಸಿ, ಸಹಕಾರಿ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ.ದೇವೇಗೌಡ ಅವರು ಪ್ರದರ್ಶನ ಮಳಿಗೆಗಳ ಉದ್ಘಾಟನೆ ನೆರವೇರಿಸಿ ಮಾತನಾಡಿ, ಬಹಳಷ್ಟು ಹಿರಿಯ ಸಹಕಾರಿಗಳು ಸಹಕಾರಿ ಸಂಘ ಸಂಸ್ಥೆಗಳನ್ನು ಕಟ್ಟಿ ಬೆಳೆಸಿ ಸಹಕಾರ ಚಳವಳಿಯ ಪರಿಣಾಮಕಾರಿ ಬೆಳವಣಿಗೆಗೆ ಶ್ರಮಿಸಿದ್ದಾರೆ. ಏಕೆಂದರೆ ಸಹಕಾರ ಕ್ಷೇತ್ರದಿಂದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯವಾಗಿದೆ. ಆದ್ದರಿಂದಲೇ ಜನಪ್ರತಿನಿಧಿಗಳು ಈ ಕ್ಷೇತ್ರದ ಸಮಾರಂಭಗಳಲ್ಲಿ ಭಾಗವಹಿಸುವ ಮೂಲಕ ಸಹಕಾರ ಕ್ಷೇತ್ರದ ಬೆಳವಣಿಗೆಗೆ ಉತ್ತೇಜನ ನೀಡಬೇಕು. ಹೀಗೆ ಸಹಕಾರಿ ಆಂದೋಲನ ಪಕ್ಷಾತೀತವಾಗಿ, ಜ್ಯಾತ್ಯಾತೀತವಾಗಿ ಬೆಳೆಯಬೇಕು ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡಿ, ಭಾರತ ದೇಶದಲ್ಲಿ ಸಹಕಾರ ಚಳವಳಿಯನ್ನು ಹುಟ್ಟು ಹಾಕಿದವರು ಶಿದ್ದನಗೌಡ ಪಾಟೀಲ. ಅವರು ನಮ್ಮ ನಾಡಿನಲ್ಲಿ ಹುಟ್ಟಿದ್ದು ನಮ್ಮ ಪುಣ್ಯ. ಶ್ರೇಷ್ಠ, ಗಟ್ಟಿ ಧುರಿಣರು ಹಾಗೂ ಮಂತ್ರಿಗಳಾಗಿದ್ದ ಕೆ.ಎಚ್.ಪಾಟೀಲರು ಸಹಕಾರ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಸಹಕಾರಿ ಸಂಸ್ಥೆಗಳಿಂದ ಹಲವರು ಬದುಕು ಕಟ್ಟಿಕೊಂಡಿದ್ದಾರೆ. ಅದೇ ರೀತಿ ಸ್ವಸಹಾಯ ಗುಂಪುಗಳನ್ನು ರಚಿಸಿಕೊಂಡು ಸ್ವಾಭಿಮಾನದ ಜೀವನ ನಡೆಸುತ್ತಿದ್ದಾರೆ. ಸಂಘಗಳು ಬೆಳೆಯಬೇಕು, ನಾವು ಬೆಳೆಯುವುದಲ್ಲ, ವೈಯಕ್ತಿಕ ಸ್ವಾರ್ಥ ಬಿಟ್ಟು ಸಂಸ್ಥೆ ಬೆಳೆಸಬೇಕು. ಸಹಕಾರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ರಾಜ್ಯದ ಪ್ರತಿಯೊಂದು ಸಹಕಾರ ಸಂಘ-ಸಂಸ್ಥೆಗಳು ಸಹ ಮಾದರಿಯಾಗಿ ಬೆಳೆಯಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅವರು ಮಾತನಾಡಿ, ದೇಶದಲ್ಲೇ ಪ್ರಥಮವಾಗಿ ಅವಿಭಜಿತ ಧಾರವಾಡ ಜಿಲ್ಲೆಯಲ್ಲಿ ಸಹಕಾರ ಚಳವಳಿ ಆರಂಭವಾಯಿತು. ಕೆಎಂಎಫ್. ನಂತೆ ರಾಜ್ಯದ ಎಲ್ಲ ಸಹಕಾರ ಸಂಸ್ಥೆಗಳು ಉತ್ತಮವಾಗಿ ಬೆಳೆಯಬೇಕು ಎಂದರು.

ಸಮಾರಂಭದಲ್ಲಿ ಸಹಕಾರ ರತ್ನ-2025 ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಲಾಯಿತು. ಉತ್ತಮ ಸಹಕಾರಿ ಸಂಸ್ಥೆಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಬ್ಯಾಡಗಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವರಾಜ ಶಿವಣ್ಣನವರ, ಶಾಸಕರು ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಅಬ್ಬಯ್ಯ ಪ್ರಸಾದ, ಶಾಸಕರು ಹಾಗೂ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಇ.ಎಸ್.ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಸ್.



ಎಫ್.ಎನ್. ಗಾಜಿಗೌಡ್ರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಎಂ.ಎಂ. ಹಿರೇಮಠ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಎಂ.ಮೈದೂರ, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ಅಧ್ಯಕ್ಷರಾದ ಜಿ.ಪಿ. ಪಾಟೀಲ, ಧಾರವಾಡ ಕರ್ನಾಟಕ ಸೆಂಟ್ರಲ್ ಕೋ–ಆಪರೇಟೀವ್ ಬ್ಯಾಂಕ್ ಅಧ್ಯಕ್ಷರಾದ ಶಿವಕುಮಾರಗೌಡ ಪಾಟೀಲ, ಹಾವೇರಿ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಮಂಜನಗೌಡ ಪಾಟೀಲ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಬಾಪುಗೌಡ ಪಾಟೀಲ, ಬಸವರಾಜ ಅರಬಗೊಂಡ, ಹಾವೇರಿ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಶಿವಾನಂದ ಸಂಗಾಪುರ, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್, ಕಾರ್ಯದರ್ಶಿ ಅಶ್ವತ್ಥನಾರಾಯಣ, ಲೆಕ್ಕಪರಿಶೋಧನಾ ಇಲಾಖೆ ನಿರ್ದೇಶಕ ಎಂ.ಡಿ.ಮಲ್ಲೂರು, ಧಾರವಾಡ ಕೆ.ಸಿ.ಸಿ.ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುನಿತಾ ಎಸ್. ಎಸ್. ಪಾಟೀಲ, ನಿಂಗನಗೌಡ ಪಾಟೀಲ ಸೇರಿದಂತೆ ಸಹಕಾರಿ ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಗಣ್ಯರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು. ಕೆ.ಸಿ.ಸಿ.ಬ್ಯಾಂಕ್ ನಿರ್ದೇಶಕ ಕೊಟ್ರೇಶಪ್ಪ ಬಸೇಗಣ್ಣಿ ಸ್ವಾಗತಿಸಿದರು.

...10ನೇ ಪುಟದಿಂದ

ವೇದವ್ಯಾಸ್ ಕಾಮತ್, ಯಶ್ ಪಾಲ್ ಸುವರ್ಣ, ಐವನ್ ಡಿಸೋಜಾ, ಕಿಶೋರ್ ಕುಮಾರ್ ಪುತ್ತೂರು, ದ.ಕ. ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ಅಧ್ಯಕ್ಷರಾದ ರವಿರಾಜ್ ಹೆಗ್ಡೆ, ಆಡಳಿತ ಮಂಡಳಿ ನಿರ್ದೇಶಕ ವಿವೇಕ್, ಡೈರಿ ವ್ಯವಸ್ಥಾಪಕ ಗುರುಪ್ರಸಾದ್, ರವಿರಾಜ್ ಉಡುಪ, ಸಹಕಾರ ಸಂಘಗಳ ನಿಬಂಧಕರಾದ ಟಿ.ಎಚ್.ಎಂ. ಕುಮಾರ್, ಜಂಟಿ ನಿಬಂಧಕರಾದ ಪ್ರಸಾದ್ ರೆಡ್ಡಿ, ಉಪನಿಬಂಧಕರಾದ ರಮೇಶ್, ಉಡುಪಿ ಜಿಲ್ಲಾ ಉಪ ನಿಬಂಧಕರಾದ ಲಾವಣ್ಯ ಕೆ.ಆರ್., ಬ್ಯಾಂಕಿನ ನಿರ್ದೇಶಕ ಹಾಗೂ ದ.ಕ. ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷರಾದ ಶಶಿಕುಮಾರ್ ರೈ ಬಾಲ್ಯೊಟ್ಟು, ಉಡುಪಿ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷರಾದ ಜಯಕರ ಶೆಟ್ಟಿ ಇಂದ್ರಾಳಿ, ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಐಕಳಬಾವ ದೇವಿಪ್ರಸಾದ್ ಶೆಟ್ಟಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್, ರಾಜ್ಯ ಸಹಕಾರ ಮಾರಾಟ ಮಹಾಮಂಡಳ ವ್ಯವಸ್ಥಾಪಕ ನಿರ್ದೇಶಕರಾದ ಲಿಂಗರಾಜ್, ಎಸ್‌ಸಿಡಿಸಿಸಿ ಬ್ಯಾಂಕ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಗೋಪಾಲಕೃಷ್ಣ ಭಟ್, ನವೋದಯಗ್ರಾಮ ವಿಕಾಸ ಚಾರಿಟೇಬಲ್ ಟ್ರಸ್ಟ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಶೆಟ್ಟಿ ಮತ್ತಿತರರು ಇದ್ದರು.

### ಸಹಕಾರ ಸಪ್ತಾಹಕ್ಕೆ ರಂಗೇರಿದ ಮೆರವಣಿಗೆ

ಸಮಾರಂಭಕ್ಕೆ ಮುನ್ನ ಎಸ್‌ಸಿಡಿಸಿಸಿ ಬ್ಯಾಂಕ್‌ನಿಂದ ಕರಾವಳಿ ಉತ್ಸವ ಮೈದಾನ ವರೆಗೆ ಆಕರ್ಷಕ ಸಹಕಾರ ಮೆರವಣಿಗೆ ನಡೆಯಿತು. ಬಳಿಕ. ವಿವಿಧ ವಸ್ತು ಪ್ರದರ್ಶನವನ್ನು ಉದ್ಘಾಟಿಸಲಾಯಿತು.

ಎಸ್‌ಸಿಡಿಸಿಸಿ ಬ್ಯಾಂಕ್‌ನಿಂದ ಸುಮಾರು 50ಕ್ಕೂ ವಿಧದ ಸ್ತಬ್ದ ಚಿತ್ರ ಸಹಿತವಾದ ಮೆರವಣಿಗೆ ಕರಾವಳಿ ಉತ್ಸವ ಮೈದಾನ ವರೆಗೆ ನಡೆಯಿತು. ಮೆರವಣಿಗೆಯಲ್ಲಿ ಅಲಂಕೃತ ರಥದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಡಾ.ಎಂ.ಎನ್.ರಾಜೇಂದ್ರ ಕುಮಾರ್ ಹಾಗೂ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ವಿರಾಜಮಾನರಾಗಿದ್ದರು.

ಮೆರವಣಿಗೆಯಲ್ಲಿ ಸಹಕಾರ ರಥ, ಚೆಂಡೆ, ಕೊಂಬು, ಸಹಕಾರಿ ಬಣ್ಣದ ಕೊಡೆಗಳು, ಭುವನೇಶ್ವರಿ ದೇವಿಯ ಸ್ತಬ್ಧಚಿತ್ರ, ಪುರುಷರ ಹಾಗೂ ಮಹಿಳೆಯರ ಡೊಳ್ಳು ಕುಣಿತ, ಮೊಳಹಳ್ಳಿ ಶಿವರಾವ್ ಸ್ತಬ್ಧಚಿತ್ರ, ಮಹಿಳೆಯರ ವೀರಗಾಸೆ, ಹೈನುಗಾರಿಕೆಯ ಸ್ತಬ್ಧಚಿತ್ರ, ಮೀನುಗಾರಿಕೆಯ ಸ್ತಬ್ಧಚಿತ್ರ, ಹೊನ್ನಾವರ ಬ್ಯಾಂಡ್, ಕೆ.ಎಂ. ಎಫ್. ನಂದಿನಿ ಆನ್‌ವ್ಹೀಲ್ ಸ್ತಬ್ಧಚಿತ್ರ, ಸುಗ್ಗಿ ಕುಣಿತ, ತುಳುನಾಡು ವೈಭವ ಸ್ತಬ್ಧಚಿತ್ರ, ನವೋದಯ ಪ್ರಚಾರ ವಾಹನ, ಪುರವಂತಿಗೆ, ಗ್ರಾಮೀಣ ಬ್ಯಾಂಕಿಂಗ್ ಚಟುವಟಿಕೆಯ ಸ್ತಬ್ಧ! ಚಿತ್ರ, ಚೆಂಡೆ ವಾಹನ, ಸೋಮನ ಕುಣಿತ, ಪಟ್ಟದ ಕುಣಿತ, ಶಿವನ ಮೂರ್ತಿಯ ಸ್ತಬ್ದ! ಚಿತ್ರ, ನವೋದಯ ಗುಂಪಿನ ಸಭೆ ನಡೆಸುವ ಸ್ತಬ್ಧ! ಚಿತ್ರ, ಗೊರವರ ಕುಣಿತ, ಪ್ರಾಥಮಿಕ ಪತ್ತಿನ ಸಂಘದ ಸ್ತಬ್ದ! ಚಿತ್ರ, ಕೃಷಿ ಚಟುವಟಿಕೆಯ ಸ್ತಬ್ದ! ಚಿತ್ರ, ಎಸ್.ಸಿ.ಡಿ.ಸಿ.ಸಿ. ಬ್ಯಾಂಕಿನ ಮೊಬೈಲ್ ಬ್ಯಾಂಕ್ ವಾಹನ ಸೇರಿದಂತೆವಿವಿ ಸ್ತಬ್ಧ! ಚಿತ್ರಗಳು ಮೆರವಣಿಗೆಯಲ್ಲಿ ಸಾಗಿ ಬಂತು.

## ಕೊಪ್ಪಳದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರ ಸಂಸ್ಥೆಗಳು ಅಬಲ ವರ್ಗದವರ ಆರ್ಥಿಕ ಶಕ್ತಿಯಾಗಿವೆ : ಕೆ. ರಾಘವೇಂದ್ರ ಹಿಟ್ನಾಳ

**ಕೊಪ್ಪಳ** : ದೇಶದ ಹಾಗೂ ರಾಜ್ಯದ ಆರ್ಥಿಕತೆಯಲ್ಲಿ ಸಹಕಾರ ಸಂಸ್ಥೆಗಳ ಕೊಡುಗೆ ಮಹತ್ವದ್ದಾಗಿದೆ. ರಾಷ್ಟ್ರದ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ ಎಂದು ಶಾಸಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಹೇಳಿದರು.

ನಗರದ ಮಧುಶ್ರೀ ಗಾರ್ಡನ್‌ನಲ್ಲಿ ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ತೋಟಗಾರಿಕೆ ಮಾರಾಟ ಮಹಾಮಂಡಳ, ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ, ಆರ್.ಕೆ.ಡಿ.ಸಿ.ಸಿ. ಬ್ಯಾಂಕ್, ರಾಯಚೂರು ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ, ಕೊಪ್ಪಳ ಜಿಲ್ಲಾ ಸಹಕಾರ ಯೂನಿಯನ್, ಜಿಲ್ಲೆಯ ಅರ್ಬನ್ ಬ್ಯಾಂಕ್‌ಗಳು, ಪಿಕಾರ್ಡ್ ಬ್ಯಾಂಕ್‌ಗಳು, ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘಗಳು, ಪತ್ತಿನ ಸಹಕಾರ ಸಂಘಗಳು ಹಾಗೂ ಇತರೆ ಸಹಕಾರ ಸಂಘಗಳು/ಸಂಸ್ಥೆಗಳು/ಸೌಹಾರ್ದ ಸಹಕಾರಿ ಸಂಘಗಳು ಹಾಗೂ ಸಹಕಾರ ಇಲಾಖೆ ಇವರುಗಳ ಸಹಯೋಗದಲ್ಲಿ ಏರ್ಪಡಿಸಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ 6ನೇ ದಿನದ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶಾಸಕರು ಹಾಗೂ ರಾಯಚೂರು, ಬಳ್ಳಾರಿ, ಕೊಪ್ಪಳ, ವಿಜಯನಗರದ ಹಾಲು ಒಕ್ಕೂಟದ ಅಧ್ಯಕ್ಷರಾದ ಕೆ. ರಾಘವೇಂದ್ರ ಹಿಟ್ನಾಳ ಅವರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಸಹಕಾರ ಕ್ಷೇತ್ರವು ಇಂದು ಎಲ್ಲಾ ವಲಯದಲ್ಲಿ ತನ್ನ ಛಾಪು ಮೂಡಿಸುತ್ತಿದೆ. ಬಡವರ, ಅಬಲರ, ಮಹಿಳೆಯರ ಆರ್ಥಿಕ ಶಕ್ತಿಯಾಗಿದೆ. ರೈತರು, ಯುವಜನತೆ, ಮಹಿಳೆಯರು ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ವಲಯದಲ್ಲಿ ಭಾಗವಹಿಸಿ ತಮ್ಮನ್ನು ತಾವು ಆರ್ಥಿಕವಾಗಿ ಸದೃಢರನ್ನಾಗಿ ಮಾಡಿಕೊಳ್ಳಬೇಕು ಎಂದರು.

ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ಅಧ್ಯಕ್ಷರಾದ ವೆಂಕಟರಾವ್ ನಾಡಗೌಡ ಅವರು ಮಾತನಾಡುತ್ತಾ, 'ಕಣಗಿನಹಾಳದಲ್ಲಿ ಸಿದ್ದನಗೌಡ ಪಾಟೀಲ ಅವರು ಸ್ಥಾಪಿಸಿದ್ದ ಸಹಕಾರ ಸಂಘದಿಂದಾಗಿ ಇಂದು ದೇಶದಾದ್ಯಂತ ಸಹಕಾರ ಕ್ಷೇತ್ರವು ಆಲದ ಮರವಾಗಿ ಬೆಳೆದಿದೆ. ಕೃಷಿ ಪತ್ತು, ಕೃಷಿಯೇತರ ಪತ್ತು, ಹೈನುಗಾರಿಕೆ, ಪಟ್ಟಣ ಸಹಕಾರ ಬ್ಯಾಂಕಿಂಗ್ ವಲಯ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿವೆ, ಕೊಪ್ಪಳ ಜಿಲ್ಲೆಯಲ್ಲಿ ಒಂದು ಸಹಕಾರಿ ಆಸ್ಪತ್ರೆಯನ್ನು ಆರಂಭಿಸುವ ಯೋಜನೆಯನ್ನು ಸಿದ್ದಪಡಿಸಲಾಗಿದೆ ಎಂದರು.

ಸಹಕಾರ ಕ್ಷೇತ್ರದ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಉಂಟಾಗಬೇಕು. ಸಹಕಾರ ಚಳವಳಿ ಮತ್ತಷ್ಟು ಸದೃಢವಾಗಬೇಕಿದೆ. ಇದೊಂದು ಸಹಕಾರಿಗಳ ಆಂದೋಲನವಾಗಿದ್ದು, "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ತತ್ವದೊಂದಿಗೆ ತೊಡಗಿಸಿಕೊಂಡಿದೆ. ಎಲ್ಲಾ ವರ್ಗದ ಜನರು ಈ ಆಂದೋಲನದಲ್ಲಿ



ಭಾಗಿಯಾಗಬೇಕು. ಭಾರದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಮಾತ್ರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ಉತ್ತಮವಾಗಿ ಕಾರ್ಯನಿರ್ವಹಿಸುತ್ತಾ ದೇಶದ ಗಮನ ಸೆಳೆಯುತ್ತಿದೆ. ಮುಂದಿನ ದಿನಗಳಲ್ಲಿ ಸಹಕಾರ ಕ್ಷೇತ್ರವನ್ನು ಉತ್ತಮ ರೀತಿಯಲ್ಲಿ ಬೆಳೆಸಿ ಮುಂದಿನ ಪೀಳಿಗೆಗೆ ಅನುಕೂಲ ಮಾಡಬೇಕಿದೆ ಎಂದರು.

ರಾಜ್ಯಮಟ್ಟದ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರನ್ನು ಸಮಾರಂಭದಲ್ಲಿ ಸನ್ಮಾನಿಸಲಾಯಿತು. ಉತ್ತಮ ಸಹಕಾರಿ ಸಂಘಗಳನ್ನು ಗುರುತಿಸಿ ಆಡಳಿತ ಮಂಡಳಿಯವರನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು.

ಯೂನಿಯನ್ ನಿರ್ದೇಶಕರಾದ ತೋಟಪ್ಪ ಕಾಮನೂರು ಸರ್ವರನ್ನು ಸ್ವಾಗತಿಸಿದರು. ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಕೆ. ಶ್ರೀನಿವಾಸ, ರಾಜ್ಯ ಸಹಕಾರ ತೋಟಗಾರಿಕೆ ಮಾರಾಟ ಮಹಾಮಂಡಳದ ಅಧ್ಯಕ್ಷರಾದ ಬಿ.ಡಿ ಭೂಕಾಂತ, ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ಉಪಾಧ್ಯಕ್ಷರಾದ ಸೂಗನಗೌಡ ಕೆ., ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕರಾದ ಹಂಪಯ್ಯಸ್ವಾಮಿ, ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿರ್ದೇಶಕರಾದ ಶ್ರೀಧರ ಕೆಸರಹಟ್ಟಿ, ಆರ್‌ಕೆಡಿಸಿಸಿ ಅಧ್ಯಕ್ಷರಾದ ವಿಶ್ವನಾಥ ಪಾಟೀಲ, ಆರ್‌ಕೆಡಿಸಿಸಿ ಉಪಾಧ್ಯಕ್ಷರಾದ ಶಿವಶಂಕರಗೌಡ ಪಾಟೀಲ, ಬಳ್ಳಾರಿ ಜಿಲ್ಲಾ ಹಾಲು ಒಕ್ಕೂಟದ ಉಪಾಧ್ಯಕ್ಷರಾದ ಎನ್. ಸತ್ಯನಾರಾಯಣ, ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ನಿರ್ದೇಶಕರಾದ ಸುರೇಶರಡ್ಡಿ ಮಾದಿನೂರು, ಯೂನಿಯನ್ ಉಪಾಧ್ಯಕ್ಷರಾದ ಹಾಲಯ್ಯ ಹುಡೇಜಾಲಿ, ಹಿರಿಯ ಸಹಕಾರಿಗಳಾದ ಯಂಕಣ್ಣ ಯರಾಶಿ, ಚನ್ನಬಸಪ್ಪ ಕಡ್ಡಿಮುಡಿ, ಸಹಕಾರ ಸಂಘಗಳ ಅಪರ ನಿಬಂಧಕರು ಹಾಗೂ ಕೊಪ್ಪಳ ಜಿಲ್ಲಾ ರಾಜ್ಯಮಟ್ಟದ ಕಾರ್ಯಕ್ರಮದ ಸಮನ್ವಯಧಿಕಾರಿಗಳಾದ ಲಕ್ಷ್ಮೀಪತಯ್ಯ, ಕಲಬುರಗಿ ಪ್ರಾಂತದ ಸಹಕಾರ ಸಂಘಗಳ ಜಂಟಿ ನಿಬಂಧಕರಾದ ವಿಶ್ವನಾಥ ಮಲಕೂಡ, ಉಪನಿಬಂಧಕರಾದ ಮಹಿಬೂಬ, ಕಲಬುರಗಿ ಕೆಐಸಿಎಂ ಉಪನ್ಯಾಸಕರಾದ ರಾಜೇಶ್ ಯಾವಗಲ್, ಯೂನಿಯನ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಅಕ್ಷಯಕುಮಾರ್, ಮಹಾಮಂಡಳದ ಕಾರ್ಯದರ್ಶಿ ಅಶ್ವತ್ಥನಾರಾಯಣ, ಜಂಟಿ ನಿಬಂಧಕರಾದ ವಿಶ್ವನಾಥ ಮಲಕೂಡ, ಉಪನಿಬಂಧಕರು ಸೇರಿದಂತೆ ಅನೇಕರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

## ಹೊಸಪೇಟೆಯಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಗ್ರಾಮೀಣ ಆರ್ಥಿಕತೆಗೆ ಸಹಕಾರ ರಂಗದಿಂದ ಉತ್ತೇಜನ : ಶಾಸಕರಾದ ಎಂ.ಪಿ. ಲತಾ



**ಹೊಸಪೇಟೆ :** ಸಹಕಾರ ಸಂಸ್ಥೆಗಳು ಗ್ರಾಮೀಣ ಆರ್ಥಿಕತೆ ಬಲಪಡಿಸಿ, ಲಕ್ಷಾಂತರ ಕುಟುಂಬಗಳಿಗೆ ಸ್ವಾವಲಂಬನೆಯ ಬದುಕು ನೀಡುವಲ್ಲಿ ಪೂರಕವಾಗಿವೆ ಎಂದು ಬಿಡಿಸಿಸಿ ಬ್ಯಾಂಕ್ ನಿರ್ದೇಶಕರು ಹಾಗೂ ಶಾಸಕರಾದ ಎಂ.ಪಿ. ಲತಾ ಹೇಳಿದರು.

ನಗರದ ಸುರಭಿ ಕಲ್ಯಾಣ ಮಂಟಪದ ಎಂ.ಪಿ. ರವೀಂದ್ರ ವೇದಿಕೆಯಲ್ಲಿ ರಾಜ್ಯ ಸಹಕಾರ ಮಹಾಮಂಡಳ, ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್, ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಹೊಸಪೇಟೆ, ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ, ಬಳ್ಳಾರಿ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಅವಳಿ ಜಿಲ್ಲೆಯ ಎಲ್ಲ ವರ್ಗದ ಸಹಕಾರಿ ಸಂಘಗಳ ಸಹಯೋಗದಲ್ಲಿ ಆಯೋಜಿಸಲಾದ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೊಸಪೇಟೆ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಕೆ. ತಿಪ್ಪೇಸ್ವಾಮಿ ಮಾತನಾಡಿ, ಗ್ರಾಮೀಣ ಭಾಗದ ಬಡ ಜನರ ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತರಲು, ಅವರ ಆರ್ಥಿಕ ಮಟ್ಟವನ್ನು ಹೆಚ್ಚಿಸುವಲ್ಲಿ ಹೈನುಗಾರಿಕೆ ಮಹತ್ವದ ಪಾತ್ರ ವಹಿಸುತ್ತಿದೆ. ಮಹಿಳೆಯರು ಹೈನುಗಾರಿಕೆ ಕೈಗೊಳ್ಳಲು ಶೇ. 3ರಷ್ಟು ಬಡ್ಡಿದರದಲ್ಲಿ ಸಾಲ ಒದಗಿಸುತ್ತಿದೆ. ಅದಕ್ಕಾಗಿ ರೂ. 100 ಕೋಟಿ ಮೀಸಟ್ಟಿದೆ'. ಸಹಕಾರ ಸಂಸ್ಥೆಗಳನ್ನು ಸಂಪೂರ್ಣ ಡಿಜಿಟಲೀಕರಣ ಮಾಡುವ ಮೂಲಕ ಗುಣಮಟ್ಟದ ಆಡಲಿತ ನೀಡಲು ಸಾಧ್ಯವಿದೆ ಎಂದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್ ಅವರು ಮಾತನಾಡಿದರು.

ಸಹಕಾರ ಸಪ್ತಾಹದ ನಿಮಿತ್ತ ರಾಜ್ಯ ಸಹಕಾರ ಮಹಾಮಂಡಳ "ಸಹಕಾರ ಪತ್ರಿಕೆ"ಯ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು. ಸಹಕಾರ ಕ್ಷೇತ್ರದಲ್ಲಿ ಸಾಧನೆಗೈದ ವಿವಿಧ ಸಾಧಕರಿಗೆ "ಸಹಕಾರ ರತ್ನ" ಪ್ರಶಸ್ತಿ ಪುರಸ್ಕೃತರಿಗೆ ಗೌರವಿಸಿ ಸನ್ಮಾನಿಸಲಾಯಿತು.

ಬಿಡಿಸಿಸಿ ಬ್ಯಾಂಕ್‌ನ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕ ಟಿ.ಎಂ. ಚಂದ್ರಶೇಖರಯ್ಯ, ಚೊಕ್ಕಬಸವನಗೌಡ್ರು, ಬಿಡಿಸಿಸಿ ಬ್ಯಾಂಕ್‌ನ ನಿರ್ದೇಶಕರಾದ ಹುಲುಗಪ್ಪ, ವಿಶ್ವನಾಥ, ಮೂಕಯ್ಯಸ್ವಾಮಿ, ಆನಂದ್, ಬಸವರಾಜ, ಅಪೆಕ್ಸ್ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದೇವರಾಜ್, ರಾಬಕೊ ಮತ್ತು ವಿಜಯನಗರ ಜಿಲ್ಲಾಸಹಕಾರ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಉಪಾಧ್ಯಕ್ಷ ಸತ್ಯನಾರಾಯಣ ನೆಕ್ಕಂಟಿ, ಹೊಸಪೇಟೆ ಬಿಡಿಸಿಸಿ ಬ್ಯಾಂಕ್‌ನ ಉಪಾಧ್ಯಕ್ಷ ಐ.ದಾರುಕೇಶ್, ಸೂಗನಗೌಡ ಬಳ್ಳಾರಿ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಜೆ.ಎಂ. ಶಿವಪ್ರಸಾದ್, ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಐ.ದಾರುಕೇಶ್, ಕೆಒಎಫ್ ಉಪಾಧ್ಯಕ್ಷ ಸೂಗನಗೌಡ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಟಿ.ಎಂ. ಚಂದ್ರಶೇಖರಯ್ಯ, ಚೊಕ್ಕ ಬಸವನಗೌಡ್ರು, ಎಲ್.ಎಸ್.ಆನಂದ್, ಸಂದೀಪ್ ಸಿಂಗ್, ವಿಕಾಸ ಬ್ಯಾಂಕ್ ಅಧ್ಯಕ್ಷ ವಿಶ್ವನಾಥ ಚ.ಹಿರೇಮಠ, ಅಪೆಕ್ಸ್ ಬ್ಯಾಂಕ್ ಸಿಇಒ ಎನ್.ದೇವರಾಜ್, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕ ಜೆ.ಎಂ. ವೀರಭದ್ರಯ್ಯ, ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕ ಜೆ.ಎಸ್. ವಿನಾಯಕ, ಹೊಸಪೇಟೆಯ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಟಿ.ಎಸ್. ರವಿಕುಮಾರ್, ಗ್ಯಾನಪ್ಪ, ಶರಣಬಸಪ್ಪ ಇದ್ದರು. ಕಾರ್ಯಕ್ರಮಕ್ಕೆ ಮೊದಲಾಗಿ ಬಿಡಿಸಿಸಿ ಬ್ಯಾಂಕ್ ಪ್ರಧಾನ ಕಚೇರಿ ಆವರಣದಿಂದ ಸುರಭಿ ಕಲ್ಯಾಣಮಂಟಪದವರೆಗೆ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಯಿತು.

ಕಾರ್ಯಕ್ರಮದ ಸಂಘಟಕರ ವತಿಯಿಂದ ಉಭಯ ಜಿಲ್ಲೆಗಳ ಸಹಕಾರ ಕ್ಷೇತ್ರದ ಇಬ್ಬರು ಧುರೀಣರಾದ ಅಮಾಜಿ ಹಮ್ಮಣ್ಣ ಮತ್ತು ಜಿ.ನೀಲಕಂಠಪ್ಪ ಅವರಿಗೆ ಜಿಲ್ಲಾ ಶ್ರೇಷ್ಠ ಸಹಕಾರಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಈ ಬಾರಿಯ ರಾಜ್ಯ ಸಹಕಾರ ರತ್ನ ಪುರಸ್ಕೃತ ಉಭಯ ಜಿಲ್ಲೆಗಳ ಎಂಟು ಮಂದಿಯ ಜತೆಗೆ ಈ ಹಿಂದೆ ಸನ್ಮಾನಕ್ಕೆ ಪಾತ್ರರಾದ 17 ಮಂದಿಯ ಪೈಕಿ ಹಲವರನ್ನು ಮತ್ತೊಮ್ಮೆ ಸನ್ಮಾನಿಸಯಿತು.

# ಹಿರಿಯೂರಿನಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹದ ಕಾರ್ಯಕ್ರಮ

ಚಿತ್ರದುರ್ಗ ಜಿಲ್ಲೆಯ ಹಿರಿಯೂರಿನ ಎಪಿಎಂಸಿ ಆವರಣದಲ್ಲಿ ಆಯೋಜಿಸಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹದ ಕಾರ್ಯಕ್ರಮವನ್ನು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್‌ರವರು ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪತ್ತಿನ ಮಹಾಮಂಡಳದ ನಿರ್ದೇಶಕರು ಹಾಗೂ ಹಿರಿಯೂರಿನ ಶ್ರೀ ಕೆಂಪೇಗೌಡ ಪತ್ತಿನ ಸಹಕಾರ ಸಂಘ ನಿ., ಅಧ್ಯಕ್ಷರು, ಆದ ಜಗದೀಶ ಕಂದಿಕೆರೆಯವರು ವಹಿಸಿ ನೆರವೇರಿಸಿದರು.

ರೈತರ ಮತ್ತು ಸಾಮಾನ್ಯ ಜನರ ಹಿತಕ್ಕಾಗಿ ಸಹಕಾರ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿದ್ದು, ಸಹಕಾರ ಕ್ಷೇತ್ರದಲ್ಲಿ ಚಿತ್ರದುರ್ಗ ಜಿಲ್ಲೆ ಪ್ರಗತಿಯತ್ತಾ ಬೆಳೆಯಲು ನಾವೆಲ್ಲರೂ ಸಹಕರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಎಪಿಎಂಸಿ ಆವರಣದಲ್ಲಿ ಭಾನುವಾರ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಜಿಲ್ಲಾ ಸಹಕಾರ ಯೂನಿಯನ್, ಜಿಲ್ಲಾ ಡಿಸಿಸಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರ ಸಂಘ, ಪಿ.ಎಲ್.ಡಿ ಮತ್ತು ಟಿಎಪಿಸಿಎಂಎಸ್ ಸಹಕಾರ ಸಂಘ, ಹಾಲು ಉತ್ಪಾದಕರ ಸಹಕಾರ ಸಂಘ ಹಾಗೂ ಕೆಂಪೇಗೌಡ ಪತ್ತಿನ ಸಹಕಾರ ಸಂಘ ನೇತೃತ್ವದಲ್ಲಿ ಆಯೋಜಿಸಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರೈತರಿಗೆ, ಸಹಕಾರ ಸಂಘಗಳು ಸಕಾಲಕ್ಕೆ ಸಾಲ ಸೇರಿದಂತೆ ಇತರೆ, ಸೌಲಭ್ಯ ನೀಡಿ ಅವರಿಗೆ ಬೆನ್ನೆಲುಬಾಗಿ ನಿಂತಿವೆ. ಸಹಕಾರ ಕ್ಷೇತ್ರ ಹೆಚ್ಚು ಅಭಿವೃದ್ಧಿಯಾಗುವುದರಿಂದ ರೈತರ ಬದುಕು ಸುಧಾರಣೆಯಾಗುತ್ತದೆ. ರೈತರು ಈ ಸೌಲಭ್ಯಗಳ ಉಪಯೋಗ ಪಡೆದುಕೊಳ್ಳಬೇಕು ಎಂದರು.



ಶಿಮುಲ್ ಹಾಗೂ ಯೂನಿಯನ್ ನಿರ್ದೇಶಕ ಬಿ.ಸಿ. ಸಂಜೀವಮೂರ್ತಿ ಮಾತನಾಡಿ ತಾಲ್ಲೂಕಿನಲ್ಲಿ 65 ಹಾಲು ಉತ್ಪಾದಕರ ಸಹಕಾರ ಸಂಘಗಳಿದ್ದು, 100 ಸಂಘಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದೇವೆ. ಹೈನುಗಾರಿಕೆ ಹೆಚ್ಚಿಸಲು ರೈತರಿಗೆ ಹಸು ಕೊಂಡುಕೊಳ್ಳಲು ಕೃಷಿ ಪದ್ಧತಿ ಸಹಕಾರ ಸಂಘಗಳು ಶೂನ್ಯ ದರದಲ್ಲಿ ಸಾಲ ಕೊಡಬೇಕು ಎಂದು ಮನವಿ ಮಾಡಿದರು.

**ತಾಲ್ಲೂಕಿನಲ್ಲಿ ಸಹಕಾರ ಸಂಘಗಳ ಸಂಘಟನೆ ಹಿತದೃಷ್ಟಿಯಿಂದ ತಾಲ್ಲೂಕು ಸಹಕಾರಿ ಯೂನಿಯನ್ ರಚನೆ ಮಾಡಲಾಗುವುದು. ತಾಲ್ಲೂಕಿನ 121 ಸಹಕಾರಿಗಳನ್ನು ಗುರುತಿಸಿದ್ದು, ಸಂಘಟನೆಯಲ್ಲಿ ತೊಡಗಿಸಿಕೊಳ್ಳುವಂತೆ ಸಹಕಾರ ನೀಡಬೇಕು. ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದಲ್ಲಿ ಸದಸ್ಯತ್ವ ಪಡೆದು ಅದರ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಮತ್ತು ಈಶ ರೈತ ಉತ್ಪಾದಕ ಸಂಸ್ಥೆಯಿಂದ ಎಲ್ಲಾ ಸಹಕಾರಿ ಸಂಘಗಳ ರೈತರಿಗೆ ಬಿತ್ತನೆ ಬೀಜ ಮತ್ತು ಯಂತ್ರೋಪಕರಣಗಳು, ರಾಸಾಯನಿಕ ರಸಗೊಬ್ಬರಗಳು, ರಾಸಾಯನಿಕ ಕ್ರಿಮಿಕೀಟ ನಾಶಕಗಳನ್ನು ಸಬ್ಸಿಡಿ ಮತ್ತು ಸಹಾಯಧನದೊಂದಿಗೆ ಒದಗಿಸುವ ಯೋಜನೆಯನ್ನು ಹಿರಿಯೂರು ತಾಲ್ಲೂಕಿನಲ್ಲಿ ಈಗಾಗಲೇ ಜಾರಿಗೆ ತಂದಿದ್ದು ಇದನ್ನು ಸದುಪಯೋಗಪಡಿಸಿಕೊಳ್ಳುವಂತೆ ಎಲ್ಲಾ ಸಹಕಾರಿಗಳಿಗೆ ಮನವಿ ಮಾಡಿದರು.**

**ತಾಲ್ಲೂಕಿನ ಎಲ್ಲಾ ಸಹಕಾರಿಗಳು, ಸಹಕಾರಿ ಸಂಘದ ಸದಸ್ಯತ್ವ ಪಡೆದು ಸೌಲಭ್ಯ ಪಡೆದವರು ಸರ್ಕಾರದ ಸೌಲಭ್ಯ ಪಡೆಯಲು ಸಹಕಾರ ಸಂಘಗಳಲ್ಲಿಯೇ ವಹಿವಾಟು ವ್ಯವಹಾರ ನಡೆಸುವುದು ಮತ್ತು ಠೇವಣಿಯನ್ನು ಸಂಗ್ರಹಿಸುವ ಮೂಲಕ ಸಹಕಾರಿ ಸಂಘಗಳ ಬಲವರ್ಧನೆಯಾಗುವುದರೊಂದಿಗೆ ಇತರೆ ಸಹಕಾರ ಸಂಘಗಳಿಗೆ ನೆರವಾಗುತ್ತದೆ ಎಂದು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರಾದ ಕೆ. ಜಗದೀಶ್ ಕಂದಿಕೆರೆ ರವರು ತಿಳಿಸಿದರು.**

ಕಾರ್ಯಕ್ರಮದಲ್ಲಿ ವಾಣೀ ವಿಲಾಸ ಪತ್ತಿನ ಅಧ್ಯಕ್ಷ ಆಲೂರು ಹನುಮಂತರಾಯಪ್ಪ, ಡಿಸಿಸಿ ಬ್ಯಾಂಕ್ ನಿರ್ದೇಶಕ ಮಂಜುನಾಥ್ ಮಾಳಿಗೆ, ಶಿಮುಲ್ ನಿರ್ದೇಶಕ ಜಿ.ಬಿ.ಶೇಖರಪ್ಪ, ಜಿಲ್ಲಾ ಯೂನಿಯನ್ ಉಪಾಧ್ಯಕ್ಷ ರವಿಕುಮಾರ್, ಉಪನಿಬಂಧಕರಾದ ದಿಲೀಪ್ ಕುಮಾರ್, ಜಿಲ್ಲಾ ಸಹಾಯಕ ನಿಬಂದಕರಾದ ಶಿವಮೂರ್ತಿ, ಯೂನಿಯನ್ ನಿರ್ದೇಶಕ ಈರಲಿಂಗೇಗೌಡ ಮಾತನಾಡಿದರು. ಉಪನ್ಯಾಸಕಿ ಎಂ.ಕೆ. ಲಕ್ಷ್ಮೀ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಎ.ಪಿ.ಎಂ.ಸಿ. ಕಾರ್ಯದರ್ಶಿ ಹರ್ಷ, ಪೌರಾಯುಕ್ತ ಎ.ವಾಸೀಂ, ಶಿವಕುಮಾರ್, ಮಹಾಲಿಂಗಪ್ಪ ಕೃಷ್ಣಮೂರ್ತಿ, ಅಜಯ್ ಕುಮಾರ್, ಮಾನಸ ಮಂಜುನಾಥ್, ಎಲ್. ತಿಪ್ಪೇಸ್ವಾಮಿ, ಆಲೂರು ಸಿದ್ದರಾಮಣ್ಣ, ಉಮಾಶಂಕರ್ ಇತರರಿದ್ದರು.



# ಸಹಕಾರ ಚಳುವಳಿ ಎತ್ತ ಸಾಗಿದೆ? 'ಎಲ್ಲರ ಚಿತ್ತ ಸಹಕಾರದತ್ತ' ಏಕೆ?

▸▸ ಶಶಿಧರ ಎಲೆ, ಸಹಕಾರ ಸಂಘಗಳ ಅಪರ ನಿಬಂಧಕರು (ನಿವೃತ್ತ)

ಸಹಕಾರ ಚಳುವಳಿ ಎತ್ತ ಸಾಗಿದೆ? 'ಎಲ್ಲರ ಚಿತ್ತ ಸಹಕಾರದತ್ತ' ಏಕೆ? ಎಂಬ ಪ್ರಶ್ನೆ ಮೂಡುತ್ತಿದೆ. ಇದಕ್ಕೆ ಕಾರಣವಿಷ್ಟೆ. ಇತ್ತೀಚೆಗಿನ ದಶಕಗಳಲ್ಲಿ ಬಂಡವಾಳಶಾಹಿಗಳಿಂದ ಬಂಡವಾಳ ಹೂಡಿಕೆಯಿಂದ ಖಾಸಗಿ ವಲಯದ ಮೂಲಕ 'ಅಭಿವೃದ್ಧಿ'ಯನ್ನು ಕಾಣುತ್ತಿದ್ದೇವೆ. ಈ ಅಭಿವೃದ್ಧಿಯಿಂದ ಸಂವಿಧಾನದ 'ಸಮತಾ ಸಮಾಜ' ನಿರ್ಮಾಣ ಸಾಧ್ಯವಾಗುತ್ತದೆಯೇ? ಎಂಬ ಪ್ರಶ್ನೆಗೆ ನಕಾರಾತ್ಮಕ ಉತ್ತರವೇ ದೊರೆಯುತ್ತದೆ. ಇದನ್ನು ಕೆಲವು ಅಂಕಿ ಅಂಶಗಳು ಸಾಬೀತು ಪಡಿಸುತ್ತವೆ. ಭಾರತದಲ್ಲಿ ಒಟ್ಟಾರೆ ಸಂಪತ್ತಿನಲ್ಲಿ ಶೇ.40ರಷ್ಟು ಭಾಗ ಕೇವಲ ಶೇ01ರಷ್ಟು ಶ್ರೀಮಂತರ ಬಳಿ ಶೇಖರಗೊಂಡಿದೆ. ಶೇ.50ರಷ್ಟು ಜನ ಶೇ.03ರಷ್ಟು ಸಂಪತ್ತು ಹಂಚಿಕೊಂಡು ಬದುಕುತ್ತಿರುವ ಪರಿಸ್ಥಿತಿ ಇದೆ. ಈ ಅಸಮಾನತೆಯ ಸಮಾಜವನ್ನು 'ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು' ಎಂಬ ದ್ಯೇಯದ ಕಡೆಗೆ ಕೊಂಡಯ್ಯಬೇಕಾದಲ್ಲಿ ಅದಕ್ಕೆ ಸೂಕ್ತ ಮಾರ್ಗವೆಂದರೆ 'ಸುವರ್ಣ ಮಾಧ್ಯಮ' ಎಂದೆನಿಸಿಕೊಂಡಿರುವ 'ಸಹಕಾರ ಮಾರ್ಗ'. ಆದುದರಿಂದ 'ಎಲ್ಲರ ಚಿತ್ತ ಸಹಕಾರ ದತ್ತ' ಆಗಿದೆ.

ವಿಶ್ವಸಂಸ್ಥೆ, ಅಂತರಾಷ್ಟ್ರೀಯ ಸಹಕಾರ ಮೈತ್ರಿ ಸಂಸ್ಥೆ (ಐ.ಸಿ.ಎ.) ಒಡಗೂಡಿ 2025 ಆದ ಈ ವರ್ಷವನ್ನು 'ಅಂತರಾಷ್ಟ್ರೀಯ ಸಹಕಾರ ವರ್ಷ' ಎಂದು ಘೋಷಿಸಿದೆ. ಈ ಘೋಷಣೆ ಮೊದಲ ಬಾರಿಗೆ ಭಾರತದಲ್ಲಿ 2024ರಲ್ಲಿ ನಡೆದ ಐ.ಸಿ.ಎ. ಸಮ್ಮೇಳನದಲ್ಲಿ ಘೋಷಿಸಲಾಯಿತು ಎಂಬುದು ಭಾರತದ ಸಹಕಾರಿಗಳಿಗೆ ಹೆಮ್ಮೆಯ ಸಂಗತಿಯಾಗಿದೆ. ವಿಶ್ವ ಸಂಸ್ಥೆ ಈ ನಿಲುವು ತೆಗೆದುಕೊಳ್ಳಲು ಕಾರಣ ವಿಶ್ವದ ಮಾನವ ಅಭಿವೃದ್ಧಿ 'ಸುಸ್ಥಿರ ಅಭಿವೃದ್ಧಿ'ಯಾಗಿರಬೇಕು ಎಂಬ ಉದ್ದೇಶ. ವಿಶ್ವ, ಮಾನವನ ಮುಂದಿನ ಪೀಳಿಗೆಗಳಿಗೂ 'ವಾಸಯೋಗ್ಯ'ವಾಗಿರಬೇಕು. 2030ರ ಒಳಗೆ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು (ಹದಿನೇಳು) ಸಾಧಿಸಬೇಕೆಂಬುದಾಗಿದೆ. ಈ ಎಲ್ಲ ಗುರಿಗಳಲ್ಲಿ 'ಸಹಕಾರ' ಮಹತ್ತರ ಪಾತ್ರ ವಹಿಸುತ್ತದೆ. ಸುಸ್ಥಿರ ಪರಿಸರದ ವಿಶ್ವನಿರ್ಮಾಣವು ಸಹಕಾರದ ಯಶಸ್ಸನ್ನು ಅವಲಂಭಿಸಿದೆ. ಕಾರಣ, ಸಹಕಾರ ಚಳುವಳಿ ವಿಶ್ವಾದ್ಯಂತ ಹರಡಿದ್ದು ಎಲ್ಲ ಅಭಿವೃದ್ಧಿ ವಲಯಗಳಿಗೂ ವ್ಯಾಪಿಸಿರುವುದಾಗಿದೆ. ಬಡವ, ಬಲ್ಲಿದ, ಎನ್ನದೆ ಎಲ್ಲ ವರ್ಗದ ಸರ್ವರನ್ನೂ ಒಳಗೊಳ್ಳುವ ಚಳುವಳಿ' ಇದಾಗಿದೆ. ಬಡತನ ನಿರ್ಮೂಲನೆ, ಶೂನ್ಯ ಹಸಿವು, ಉತ್ತಮ ಆರೋಗ್ಯ ಮತ್ತು ಯೋಗಕ್ಷೇಮ, ಲಿಂಗ ಸಮಾನತೆ, ಶುದ್ಧನೀರು ಮತ್ತು ನೈರ್ಮಲ್ಯ, ಕೈಗೆಡುಕುವ ಮತ್ತು ಶುದ್ಧ ಇಂಧನ, ಯೋಗ್ಯ ಉದ್ಯೋಗ ಮತ್ತು ಆರ್ಥಿಕ ಬೆಳವಣಿಗೆ, ಕೈಗಾರಿಕರಣ, ಅವಿಷ್ಕಾರ ಮತ್ತು ಮೂಲಸೌಕರ್ಯ, ಅಸಮಾನತೆಯನ್ನು ಕಡಿಮೆ ಮಾಡುವುದು, ಸುಸ್ಥಿರ ನಗರಗಳು ಮತ್ತು ಸಮುದಾಯಗಳು, ಜವಾಬ್ದಾರಿಯುತ ಬಳಕೆ ಮತ್ತು ಉತ್ಪಾದನೆ, ಹವಾಮಾನ ಕ್ರಮ, ನೀರಿನೊಳಗಿನ ಜೀವನ, ಭೂಮಿಯ ಮೇಲಿನ ಜೀವನ, ಶಾಂತಿ, ನ್ಯಾಯ ಮತ್ತು ಬಲವಾದ ಸಂಸ್ಥೆಗಳು, ಗುರಿಗಳಿಗಾಗಿ ಪಾಲುದಾರಿಕೆಗಳು.

ಈ ಮೇಲಿನ ಗುರಿಗಳ ಸಾಧನೆಗೆ ಸಹಕಾರ ಸಂಸ್ಥೆಗಳು ವಾಹಕಗಳಾಗಿ ಕಾರ್ಯನಿರ್ವಹಿಸುತ್ತಿವೆ. ಭಾರತದಲ್ಲಿಯೂ ಸಹಕಾರ ಚಳುವಳಿಯು ತನ್ನ ಪ್ರಸ್ಥುತತೆಯನ್ನು ಉಳಿಸಿಕೊಂಡು ಮೇಲಿನ ಗುರಿಗಳ ಸಾಧನೆಗೆ ತನ್ನ ಕೊಡುಗೆ ನೀಡುತ್ತಿರುವುದಲ್ಲದೆ, 'ವಿಕಸಿತ ಭಾರತ'ದ ಕನಸು(ಗುರಿ) 2047ಕ್ಕೆ (ಸ್ವಾತಂತ್ರ್ಯ ಶತಮಾನೋತ್ಸವ ವರ್ಷ) ನನಸು ಮಾಡುವಲ್ಲಿ ಅದರ ದಿಸೆ ಯಾವ ರೀತಿಯಲ್ಲಿರಬೇಕು? ತನ್ನ ಸಾಮರ್ಥ್ಯ ವೃದ್ಧಿಗೊಳಿಸಿಕೊಳ್ಳಬೇಕಾದ ಬಗೆ, ದೌರ್ಬಲ್ಯಗಳನ್ನು ನೀಗಿಸುವ ಬಗೆ, ಅವಕಾಶಗಳನ್ನು ಹೇಗೆ? ಬಳಸಿಕೊಳ್ಳಬೇಕು ಸವಾಲುಗಳನ್ನು ಮೆಟ್ಟುವ ಬಗ್ಗೆ (ಪರಿಸರ ಅಧ್ಯಯನ) 'ಚಿಂತನ – ಮಂಥನ' ನಡೆಸಲು ಇದು ಸುಸಮಯ.

ಭಾರತದಲ್ಲಿ 08 ಲಕ್ಷ ಸಹಕಾರ ಸಂಘಗಳಿದ್ದು 30 ಕೋಟಿ ಸದಸ್ಯರಿರುತ್ತಾರೆ. 'ಸಹಕಾರದಿಂದ ಸಮೃದ್ಧಿ' ಎಂಬುದು ಕೇಂದ್ರ ಸರ್ಕಾರದ ಘೋಷವಾಕ್ಯ ಮತ್ತು ಅದು ಒಂದು ಸದಾಶಯ. ಈ ಹಿನ್ನೆಲೆಯಲ್ಲಿ ಭಾರತದ ಸಹಕಾರ ಬೆಳೆದು ಬಂದ ದಾರಿ, ಹಾಲಿ ಪರಿಸ್ಥಿತಿ ಮತ್ತು ಮುಂದಿನ ದಾರಿ ಯಾವುದು? ಎಂಬ ವಿಶ್ಲೇಷಣೆ ಅಗತ್ಯ.

ಸ್ವಾತಂತ್ರ್ಯ ನಂತರ ಭಾರತದ ಸಹಕಾರ ಚಳುವಳಿಗೆ ಬೆಂಬಲವಾಗಿ ನಿಂತದ್ದು ಸರ್ಕಾರ. ಪಂಚವಾರ್ಷಿಕ ಯೋಜನೆಗಳಲ್ಲಿ ಅದಕ್ಕಾಗಿ ಆಯ ವ್ಯಯದಲ್ಲಿ ಅವಕಾಶ ಒದಗಿಸಿ ಎಲ್ಲ ಅಭಿವೃದ್ಧಿ ಇಲಾಖೆಗಳ ಮೂಲಕ ಆಯಾ ವಲಯದ ಅಭಿವೃದ್ಧಿ ಸಹಕಾರ ಸಂಘಗಳ ಸ್ಥಾಪನೆ ಮೂಲಕವೇ ಅಭಿವೃದ್ಧಿ ಸಾಧಿಸಲಾಯಿತು. ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ, ನಬಾರ್ಡ್‌ನ ಕೊಡುಗೆ ಅನನ್ಯ. ರಾಜ್ಯ ಸರ್ಕಾರಗಳ ಯಶಸ್ವಿ ಅನುಷ್ಠಾನ ಅಲ್ಲಗಳೆಯಲಾಗುವುದಿಲ್ಲ. ಹಸಿರುಕ್ರಾಂತಿ, ಶ್ವೇತ ಕ್ರಾಂತಿ, ಹಳದಿ ಕ್ರಾಂತಿ, ನೀಲಿ ಕ್ರಾಂತಿಗೆ ಕಾರಣವಾದ ವೈಜ್ಞಾನಿಕ, ತಾಂತ್ರಿಕ ಕಾರಣ ಗಳೊಡನೆ 'ಸಹಕಾರ'ವು ಪ್ರಮುಖ ವಾಹಕವಾಗಿ ಕಾರ್ಯವೆಸಗಿದ್ದರಿಂದ ಇದು ಸಾಧ್ಯವಾಯಿತು. 1990ರ ದಶಕದಿಂದ ಆರಂಭಗೊಂಡ ಉದಾರೀಕರಣ, ಖಾಸಗಿಕರಣ, ಜಾಗತಿಕರಣ, ವಿಭಿನ್ನ ಪರಿಸರ ನಿರ್ಮಾಣಕ್ಕೆ ಕಾರಣವಾಯಿತು. ಸಹಕಾರ ಸ್ಪರ್ಧೆಗೆ ಒಗ್ಗಿಕೊಳ್ಳಬೇಕಾಯಿತು. ಹಾಲಿ ಸಂಕ್ಷಿಪ್ತವಾಗಿ ವಲಯವಾರು ಅವಲೋಕನ ಮಾಡಿದಲ್ಲಿ ತದನಂತರದ ಪರಿಸ್ಥಿಯ ಅರಿವು ನಮಗೆ ಮೂಡುತ್ತದೆ. ಒಟ್ಟಾರೆ ಮಾರುಕಟ್ಟೆ (ಆರ್ಥಿಕತೆ)ಯಲ್ಲಿ ನಮ್ಮ ಪಾಲು ಎಷ್ಟಿದೆ? ಇದನ್ನು ಹೆಚ್ಚಿಸಿಕೊಳ್ಳುವ ಮಾರ್ಗೋಪಾಯಗಳೇನು? ಮೇಲಿನ ಕಂಡಿಕೆಯಲ್ಲಿ ತಿಳಿಸಿದಂತೆ ಹಾಲಿ ಪರಿಸರದ ಅಧ್ಯಯನ ನಮಗೆ ದಾರಿ ತೋರಿಸುತ್ತದೆ. ಮತ್ತು ಎತ್ತ ಸಾಗಬೇಕು? ಎಂಬುದು ತಿಳಿದುಬರುತ್ತದೆ.

**ಅಲ್ಪಾವಧಿ ಕೃಷಿ ಪತ್ತು ರಚನೆ :** ಈ ಮೂರು ಹಂತದ ವ್ಯವಸ್ಥೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು

ಬುನಾದಿ. ಇವು ಬಲಗೊಳ್ಳಬೇಕಾದದ್ದು ಅತ್ಯಂತ ಪ್ರಮುಖ. ಈ ಸಹಕಾರ ಸಂಘಗಳ ಸದಸ್ಯರ (ವ್ಯಕ್ತಿಗಳು) ಅಗತ್ಯತೆಗಳ ಪೂರೈಕೆಯೇ ಈ ರಚನೆಯ ಅಂತಿಮ ಗುರಿ. ಇದು ಪೂರೈಕೆಯಾಗುತ್ತಿದೆಯೇ? ಪೂರೈಕೆಯಾಗುತ್ತಿದ್ದಲ್ಲಿ ಎಷ್ಟರ ಮಟ್ಟಿಗೆ ಸಾಧ್ಯವಾಗಿದೆ. ಭಾರತ ಸರ್ಕಾರದಿಂದ ರಚಿತ ಮಾದರಿ ಉಪಯನಿಯಮಗಳಿಗನುಗುಣವಾಗಿ 1. 'ವಿವಿದೋದ್ದೇಶ ಗ್ರಾಮೀಣ ಅಭಿವೃದ್ಧಿ ಸಹಕಾರ ಸಂಘ'ವಾಗಿ ಇದು ಕಾರ್ಯನಿರ್ವಹಿಸಬೇಕು. 2. ಗ್ರಾಮೀಣ ಎಲ್ಲ ಬಗೆಯ ವೃತ್ತಿಯಲ್ಲಿರುವವರು 'ರೈತ' ಎಂದೆನಿಸಿಕೊಳ್ಳುತ್ತಾರೆ. 3. ಕೃಷಿ ಮಾತ್ರವಲ್ಲದೇ ಇತರೆ ಎಲ್ಲ ವೃತ್ತಿಗಳು (ಕೃಷಿ, ಹೈನುಗಾರಿಕೆ, ಇತರೆ) ಕೃಷಿ ವ್ಯಾಪ್ತಿಯಲ್ಲಿ ಒಳಗೊಂಡು ಕೃಷಿ ಸಾಲ (ಕೆ.ಸಿ.ಸಿ ಸಾಲ, ಕಿಸಾನ್ ಕ್ರೆಡಿಟ್ ಸಾಲ) (ದುಡಿಯುವ ಬಂಡವಾಳ ಸಾಲ) ಎಂದೆನಿಸಿಕೊಳ್ಳುತ್ತದೆ. 4. ಸಾರ್ವಜನಿಕ ವಿತರಣೆ ವ್ಯವಸ್ಥೆಯಲ್ಲಿ ಪಾಲ್ಗೊಳ್ಳುವುದು. 5. ಕೃಷಿ ಮತ್ತು ಕೃಷಿ ಅವಲಂಭಿತ ವೃತ್ತಿಗಳಿಗೆ ಅವಶ್ಯಕತೆಗಳ ಪೂರೈಕೆ (ರಸಗೊಬ್ಬರ, ಬೀಜ, ಇತರೆ). 6. ಅಡಿಗೆ ಅನಿಲ, ಇಂಧನ, ಇತರೆ ವಸ್ತುಗಳ ವಿವರಣೆ ಮಾಡುವುದು. 7. ಕೃಷಿ, ತೋಟಗಾರಿಕೆ ಮತ್ತು ಇತರ ಉತ್ಪನ್ನಗಳ ಸಂಗ್ರಹಣೆ, ಸಂಸ್ಕರಣೆ, ಮಾರಾಟ. ನೂತನವಾಗಿ ಈ ಸಹಕಾರ ಸಂಘಗಳನ್ನು ರಚಿಸಲು ಕ್ರಮ ಕೈಗೊಳ್ಳಬೇಕು. ಕಟ್ಟ ಕಡೆಯ ಗ್ರಾಮೀಣ ವ್ಯಕ್ತಿಯನ್ನು ತಲುಪಬೇಕು ಎಂಬುದು ಉದ್ದೇಶ. ಇದಕ್ಕಾಗಿ ಇದರ ವ್ಯವಹಾರಗಳನ್ನು ಡಿಜಿಟಲೀಕರಣಗೊಳಿಸಿ ನಿರ್ವಹಣೆ ಕಂಪ್ಯೂಟರಿಕರಣಗೊಳ್ಳಬೇಕು ಎಂಬ ಸದಾಶಯವೂ ಇದೆ. ಅದಕ್ಕಾಗಿ ಕೇಂದ್ರ ಸರ್ಕಾರ ಸಹಾಯಹಸ್ತವನ್ನು ನೀಡಲು ಮುಂದೆ ಬಂದಿದೆ. ಈ ಬೆಳವಣಿಗೆಗಳು ಆಶಾದಾಯಕವಾಗಿದೆ. ಪ್ರಶ್ನೆ ಎಂದರೆ ನಮ್ಮೀ ಸದಸ್ಯರು ಇದಕ್ಕಾಗಿ ತಯಾರಾಗಿದ್ದಾರೆಯೇ? ಎಷ್ಟರ ಮಟ್ಟಿಗೆ ಇವರು ಒಳಗೊಳ್ಳುತ್ತಿದ್ದಾರೆ. ಕೇವಲ ಸರ್ಕಾರದ ಕಾರ್ಯಕ್ರಮವಾಗದೇ 'ಸಹಕಾರ'ದ ಕಾರ್ಯಕ್ರಮವಾಗಿದೆಯೆ? ಬಂಡವಾಳ ಕ್ರೋಡೀಕರಣ ಅತಿ ಅಗತ್ಯ. ನಬಾರ್ಡ್ ಪುನರ್ಧನ ಇಳಿಕೆ ಆತಂಕ ಮೂಡಿಸಿದೆ. ಈ ರಚನೆಯನ್ನು ಎರಡು ಹಂತದ ವ್ಯವಸ್ಥೆಯಾಗಿ ರೂಪುಗೊಳಿಸಲು ಕ್ರಮಗಳಾಗುತ್ತಿತ್ತು. (ಉದಾ : ಕೇರಳ ರಾಜ್ಯದಲ್ಲಿ ಎರಡು ಹಂತದ ವ್ಯವಸ್ಥೆಯಾಗಿ ರೂಪುಗೊಂಡಿದೆ) ಆದರೆ 'ಸಹಕಾರ ನೀತಿ 2025'ರಲ್ಲಿ, ಮೂರು ಹಂತದ ರಚನೆ ಬಲಗೊಳಿಸುವ ಬಗ್ಗೆ ಉಲ್ಲೇಖಿಸಿದೆ. ಈ ರಚನೆಯು ಸ್ವತಂತ್ರವಾಗಿ ತನ್ನ ಬಂಡವಾಳವನ್ನು ತಾನೇ ಕ್ರೋಡಿಕರಿಸಬೇಕಾದ ಅವಶ್ಯಕತೆ ಬಗ್ಗೆ ಮನಗಾಣಬೇಕಿದೆ. ರಾಜ್ಯ ಸರ್ಕಾರದ ಬಡ್ಡಿರಹಿತ ಬೆಳೆಸಾಲ ವಿತರಣೆ ಹೆಚ್ಚಳಗೊಳಿಸಲು ಇದು ಅತಿ ಅವಶ್ಯವಾಗಿದೆ.

**ದೀರ್ಘಾವಧಿ ಪತ್ತು ರಚನೆ :** ಹಸಿರು ಕ್ರಾಂತಿಗೆ ಕಾರಣವಾದ ಹೂಡಿಕೆ ಸಾಲದ ಈ ವಲಯ ನಶಿಸಿದೆ. ಕೇವಲ ಎಂಟು ರಾಜ್ಯಗಳಲ್ಲಿ ಅಸ್ತಿತ್ವದಲ್ಲಿದ್ದು, ಎರಡು ಹಂತದ ವ್ಯವಸ್ಥೆಯಾಗಿದ್ದು ನಬಾರ್ಡ್ ಪುನರ್ಧನ ಸೌಲಭ್ಯ ಅವಲಂಭಿಸಿದೆ. ಕರ್ನಾಟಕದಲ್ಲಿ ತಾಲ್ಲೂಕಿಗೆ ಒಂದರಂತೆ ಇರುವ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಬ್ಯಾಂಕಗಳಲ್ಲಿ ಸುಮಾರು ಎಪ್ಪತ್ತು ಬ್ಯಾಂಕ್‌ಗಳು ತಮ್ಮದೇ ಸಂಪನ್ಮೂಲಗಳ ಮೂಲಕ ಲಾಭದಾಯಕವಾಗಿ ಕಾರ್ಯನಿರ್ವಹಿಸುತ್ತಿವೆ. ಸದಸ್ಯರಿಂದ ಬ್ಯಾಂಕ್‌ಗೆ ಹೊರಬಾಕಿ ಇಲ್ಲದಿದ್ದರೂ ರಾಜ್ಯ ಬ್ಯಾಂಕ್‌ಗೆ ಪಾವತಿ ಬಾಕಿ ಇದ್ದು 'ಗ್ಯಾಪ್' ಸಮಸ್ಯೆ ಎದುರಿಸುತ್ತಿವೆ. ರಾಜ್ಯ ಸರ್ಕಾರದ ಆರ್ಥಿಕ ಬೆಂಬಲವಿಲ್ಲದೇ ಇದರ ಅಸ್ತಿತ್ವದ ಆಶಯ ಪೂರ್ಣಗೊಳ್ಳದು.

**ಹೈನುಗಾರಿಕೆ ವಲಯ :** ಪಶು ಸಂಗೋಪನಾ ಇಲಾಖೆಯ ಮುಖಾಂತರ ಅನೇಕ ಯೋಜನೆಗಳು ಭಾರತದ ಸ್ವಾತಂತ್ರ್ಯ ನಂತರ ಕೈಗೊಂಡಿದ್ದರೂ ಅತ್ಯಂತ ಯಶಸ್ಸು ಕಂಡಿದ್ದು 'ಅಮುಲ್' ಮಾದರಿಯನ್ನು ರಾಷ್ಟ್ರಾದ್ಯಂತ ವಿಸ್ತರಿಸುವ ಯೋಜನೆ. ಭಾರತದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಯವರ ಕನಸನ್ನು ನನಸು ಮಾಡಿದ ಕೀರ್ತಿ ಡಾ. ವರ್ಗೀಸ್ ಕುರಿಯನ್‌ರವರಿಗೆ ಸಲ್ಲುತ್ತದೆ. ಅಮುಲ್‌ನ ಯಶಸ್ಸಿಗೆ ಕಾರಣರಾದ ಕುರಿಯನ್ ರವರಿಗೆ ಬೆಂಬಲವಾಗಿ ನಿಂತವರು ಅಮುಲ್ ಸ್ಥಾಪನೆಯ ನೇತೃತ್ವ ವಹಿಸಿ ಮೂರು ದಶಕಗಳ ಕಾಲ ಅದರ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಶ್ರೀ ತ್ರಿಭುವನ್‌ದಾಸ್ ಪಟೇಲರು. (ಆನಂದ್, ಗುಜರಾತ್ ನಲ್ಲಿದ್ದ ಐ.ಆರ್.ಎಂ.ಎ. ಇರ್ಮಾ ವನ್ನು ಯೂನಿವರ್ಸಿಟಿ ಯಾಗಿ ಪರಿವರ್ತಿಸಿ ಅದಕ್ಕೆ ಇವರ ಹೆಸರನ್ನು ಇರಿಸಲಾಗಿದೆ. ಹಾಗಾಗಿ ಇದು ತ್ರಿಭುವನ್ ಸಹಕಾರ ವಿಶ್ವವಿದ್ಯಾಲಯ ಎಂದನಿಸಿಕೊಂಡಿದೆ.) ಇವರು ಸರ್ಧಾರ್ ವಲ್ಲಭಾಯ್ ಪಟೇಲರ ಅನುಯಾಯಿಗಳು. ಇವರ ಪ್ರೇರಣೆ, ಮಾರ್ಗದರ್ಶನವೇ 'ಅಮುಲ್' ಸೃಷ್ಟಿಗೆ ಕಾರಣವಾಯಿತು. ರಾಷ್ಟ್ರೀಯ ಹೈನು ಅಭಿವೃದ್ಧಿ ಮಂಡಲಿ (ಎನ್.ಡಿ.ಡಿ.ಬಿ) ಮತ್ತು ಭಾರತೀಯ ಹೈನು ನಿಗಮ (ಐ.ಡಿ.ಸಿ) (ಈಗ ಎರಡೂ ವಿಲೀನಗೊಂಡಿವೆ) ಸ್ಥಾಪನೆ ಎರಡೂ ಸಂಸ್ಥೆಗಳಿಗೆ ಕುರಿಯನ್ ರವರನ್ನು ಅಧ್ಯಕ್ಷರಾಗಿದ್ದು (ಲಾಲ್ ಬಹದ್ದೂರ್ ಶಾಸ್ತ್ರಿಯವರ ದೂರದೃಷ್ಟಿಯ ಫಲ) ವಿಶ್ವ ಸಂಸ್ಥೆ, ಇ.ಇ.ಸಿ. (ಯುರೋಪಿಯನ್ ಎಕನಮಿಕ್ ಕಮ್ಯೂನಿಟಿ) ನೆರವಿನಿಂದ ಕ್ಷೀರಾಧಾರ ಯೋಜನೆ i,ii,iii, (ಆಪರೇಷನ್ ಫ್ಲಡ್)ಗಳ ಯಶಸ್ವಿ 'ಸಹಕಾರ ಮಾದರಿ' ಅನುಷ್ಠಾನ ಭಾರತದಲ್ಲಿ ಕ್ಷೀರ ಕ್ರಾಂತಿ (ಶ್ವೇತ ಕ್ರಾಂತಿ)ಗೆ ಕಾರಣವಾಗಿರುವುದು ಈಗ ಇತಿಹಾಸ. ಕರ್ನಾಟಕದಲ್ಲಿ ಈ ಮಾದರಿಯ ಯಶಸ್ವಿ ಅನುಷ್ಠಾನ 'ನಂದಿನಿ'ಯನ್ನು ಒಂದು ಬ್ರಾಂಡ್ ಆಗಿ ರೂಪಿಸಿರುವುದು ಕನ್ನಡಿಗರ ಹೆಮ್ಮೆ. ಅಮೇರಿಕೆಯಲ್ಲಿಯೂ ಮಾರುಕಟ್ಟೆ ಸೃಷ್ಠಿಯಾಗಿರುವುದು 'ಪೇಟದ ಮೇಲೆ ಗರಿ' ಮೂಡಿಸಿದೆ. ಒಕ್ಕೂಟ, ಮಹಾಮಂಡಳದ ನಾಯಕತ್ವ ವಹಿಸುವುದು ರಾಜಕೀಯ ನಾಯಕರ ಪ್ರತಿಷ್ಟೆಯ ಪ್ರಶ್ನೆಯಾಗಿರುವುದು ಶ್ಲಾಘನೀಯ. ಆದರೆ ಚುನಾವಣೆಗಳು ಪ್ರತಿಷ್ಠೆಯ ಪ್ರಶ್ನೆಯಾಗಿ 'ಸ್ವಚ್ಛತೆ'ಯನ್ನು ಕಳೆದುಕೊಳ್ಳುತ್ತಿರುವುದು ಆಘಾತಕಾರಿ. ಇದರ ದುಷ್ಪರಿಣಾಮಗಳು ಇಡೀ ರಚನೆಯ ಮೇಲೆ ಪ್ರಭಾವ ಬೀರಲಿದ್ದು ನಕಾರತ್ಮಕತೆಗೆ ಕಾರಣವಾಗುತ್ತದೆ. ನೆರೆ ರಾಜ್ಯಗಳಲ್ಲಿ ಈಗಾಗಲೆ ಖಾಸಗಿ ಒಡೆತನದ ಸಂಸ್ಥೆಗಳಿಂದ ನಮ್ಮ 'ಸಹಕಾರ ವ್ಯವಸ್ಥೆ'ಗೆ ಧಕ್ಕೆ ಬಂದಿರುವುದನ್ನು ನಾವು ಪ್ರತ್ಯಕ್ಷವಾಗಿ ಕಾಣುತ್ತಲಿದ್ದೇವೆ. ಕರ್ನಾಟಕದಲ್ಲಿ ಸರ್ಕಾರವು ಸಹಕಾರಿ ಹಾಲು ಉತ್ಪಾದಕರಿಗೆ 'ಕ್ಷೀರ ಭಾಗ್ಯ' ಯೋಜನೆಯಡಿಯಲ್ಲಿ ಪ್ರತಿ ಲೀಟರ್ ಹಾಲಿಗೆ ರೂ. ಐದು ನೀಡಿ ಪ್ರೋತ್ಸಾಹ ನೀಡುತ್ತಿರುವುದು

ಬೆಂಬಲವಾಗಿ ಯಶಸ್ಸಿಗೆ ಕಾರಣವಾಗಿರುವುದನ್ನು ಒಪ್ಪಬೇಕು. ಈ ರಚನೆಯಲ್ಲಿ ಪ್ರಾಥಮಿಕ ಸಹಕಾರ ಸಂಘಗಳೇ ಬುನಾದಿ. ಇದರ ಅತ್ಯುತ್ತಮ ಕಾರ್ಯಚರಣೆಗೆ ಉನ್ನತ ಮಟ್ಟದ ಸಂಸ್ಥೆಗಳು ಅನುವು ಮಾಡುವುದು ಮತ್ತು ಸೂಕ್ತ ಪರಿಸರ ನಿರ್ಮಾಣ ಮಾಡಿ ಖಾಸಗಿಯವರ ಆಸೆ, ಆಮಿಷಗಳಿಗೆ ಒಳಗಾಗದೆ ಅವರ ಪೈಪೋಟಿಯನ್ನು ಎದುರಿಸಿ 'ಸಹಕಾರ ಸಂಘಗಳ'ನ್ನು ಉಳಿಸಬೇಕಾಗಿದೆ. ಅಮುಲ್ ಆಶ್ರಯದಲ್ಲಿ ರಾಷ್ಟ್ರಮಟ್ಟದ ಸರ್‌ದಾರ್ ಪಟೇಲ್ ಸಹಕಾರಿ ಡೈರಿ ಮಹಾಮಂಡಳಿ ನಿ., ಸ್ಥಾಪನೆಗೊಂಡಿದೆ. ಈ ವಲಯದ ಅಗತ್ಯತೆಯ, ಕಷ್ಟ ನಷ್ಟಗಳ ಬಗ್ಗೆ ಪರಿಹಾರ, ಮಾರ್ಗೋಪಾಯಗಳನ್ನು ಇದರ ಮೂಲಕ ಕಂಡುಕೊಳ್ಳಬೇಕಾದ ಅಗತ್ಯತೆ ಇದೆ.

**ಕೃಷಿ ಉತ್ಪನ್ನ ಮಾರುಕಟ್ಟೆ ಮತ್ತು ಸಂಸ್ಕರಣೆ :** ಪಂಚವಾರ್ಷಿಕ ಯೋಜನೆಯ ಅಂತ್ಯದ ನಂತರ ಈ ಸಹಕಾರ ರಚನೆಯಲ್ಲಿ ವಿವಿಧ ಹಂತಗಳ ಸಾವಯವ ಸಂಬಂಧಗಳು ಮುರಿದು ಕೇವಲ ಚುನಾವಣೆ, ಆಡಳಿತ ಮಂಡಳಿ ರಚನೆಗೆ ಸೀಮಿತ ಗೊಂಡಿದೆ. ಗೋದಾಮು, ಸಂಸ್ಕರಣೆ ಘಟಕಗಳು ಸ್ಥಗಿತಗೊಂಡಿವೆ. ಖಾಸಗಿಯವರಿಗೆ ಬಾಡಿಗೆಗೆ ನೀಡಲಾಗಿದೆ. ಕೃಷಿ ಉತ್ಪನ್ನ ಖರೀದಿ ಮಾರಾಟ ಕೆಲವೇ ಬೆರಳಿಣಿಕೆಯಷ್ಟು ಸಹಕಾರ ಸಂಘಗಳು ನಡೆಸುತ್ತಿವೆ. ಸರ್ಕಾರದ ಬೆಂಬಲ ಬೆಲೆ ಯೋಜನೆಗಳ ಅನುಷ್ಠಾನವಾಗುತ್ತದೆ ಮಾತ್ರ ಸ್ಥಳೀಯ ದಾನ್ಯ, ಬೇಳೆಕಾಳುಗಳ, ಇತರೆ ಕೃಷಿ ಉತ್ಪನ್ನಗಳ ಖರೀದಿ, ಸಂಸ್ಕರಣೆ, ಸಾಗಾಣೆ, ಮಾರಾಟ ಪ್ರಕ್ರಿಯೆಯಲ್ಲಿ ತನ್ನ ಪಾಲು ಅತ್ಯಂತ ಕ್ಷೀಣವಾಗಿದೆ. ಇವುಗಳ ಪುನಶ್ಚೇತನ, ಸುಧಾರಣೆ ಬಗ್ಗೆ ಮಾರ್ಗೋಪಾಯಗಳನ್ನು ಕಂಡುಕೊಳ್ಳ ಬೇಕಿದೆ. ಸರ್ಕಾರ ಮತ್ತು ನಬಾರ್ಡ್ ಸಹ 'ರೈತ ಉತ್ಪಾದನೆ ಸಂಸ್ಥೆ / ಕಂಪನಿಗಳ ಸ್ಥಾಪನೆಗೆ ಉತ್ತೇಜನ ನೀಡುತ್ತಿರುವುದನ್ನು ಕಾಣುತ್ತಲಿದ್ದೇವೆ. ಇದು ತೋಟಗಾರಿಕೆ ಉತ್ಪನ್ನಗಳಿಗೂ ಅನ್ವಯ ವಾಗುತ್ತದೆ. ವಾಣಿಜ್ಯ ಬೆಳೆಯಾದ ಅಡಿಕೆ ಸಂಬಂಧಿಸಿದಂತೆ ಅತ್ಯುತ್ತಮವಾಗಿ ಸಹಕಾರ ಸಂಘಗಳು ರೂಪುಗೊಂಡಿರುವುದು ಸಂತೋಷದಾಯಕ ಸಂಗತಿಯಾಗಿದೆ. ಬಹುತೇಕ ಸಹಕಾರ ಸಕ್ಕರೆ ಕಾರ್ಖಾನೆಗಳು ಖಾಸಗಿಕರಣಗೊಂಡಿದೆ. (ಕರ್ನಾಟಕದಲ್ಲಿ) ಪುನಃ ಸಹಕಾರ ತೆಕ್ಕೆಯೊಳಗೆ ಅವುಗಳನ್ನು ಒಳಗೊಳ್ಳುವುದು ಹೇಗೆ? ಇದರ ಅವಶ್ಯಕತೆಯೇ ಇಲ್ಲವೇ? ಎಂಬ ಪ್ರಶ್ನೆಗಳು ಮೂಡುತ್ತವೆ.

ಇದೇ ಸಮಯದಲ್ಲಿ ರಾಷ್ಟ್ರಮಟ್ಟದಲ್ಲಿ ಸಾವಯವ, ರಫ್ತು, ಬೀಜ ಉತ್ಪನ್ನ, ಮಾರಾಟ ಸಹಕಾರ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ. ಇದಕ್ಕೆ ಪೂರಕವಾಗಿ ಕೆಳಗಿನ ಹಂತದ ಸಹಾರ ಸಂಸ್ಥೆಗಳು ಇವುಗಳ ಸದಸ್ಯತ್ವ ಪಡೆದು ಕೃಷಿ ಉತ್ಪನ್ನಗಳನ್ನು ಇದರ ಮೂಲಕ ಮಾರುಕಟ್ಟೆ ಮಾಡಿ ರೈತರಿಗೆ ನ್ಯಾಯಯುತ ಬೆಲೆ ದೊರಕುವಂತೆ ಮಾಡಬೇಕಿದೆ.

**ಮೀನುಗಾರಿಕೆ ಸಹಕಾರ ವಲಯ :** ಕರಾವಳಿ ಮತ್ತು ಒಳನಾಡು ಮೀನುಗಾರಿಕೆ ವಲಯಗಳಲ್ಲಿ ಸರ್ಕಾರದ ಬೆಂಬಲದೊಡನೆ ಅತ್ಯಂತ ಉತ್ತಮ ಪ್ರಾಥಮಿಕ ಮತ್ತು ಒಕ್ಕೂಟಗಳು, ಮಹಾಮಂಡಳಿಗಳು ಸ್ಥಾಪಿ ಸಲ್ಪಟ್ಟು ಯಶಸ್ವಿ ಕಾರ್ಯಾಚರಣೆ ನಡೆಸುತ್ತಿವೆ. ಖಾಸಗಿ ವಲಯದೊಡನೆ ಸ್ಪರ್ಧಿಸಿ ಒಟ್ಟಾರೆ ಮಾರುಕಟ್ಟೆಯಲ್ಲಿ ತನ್ನ ಪಾಲನ್ನು ಹೆಚ್ಚಳಗೊಳಿಸುವ ಅವಶ್ಯಕತೆ ಇದೆ.

**ಸಹಕಾರ ನೀತಿ 2025 :** ಭಾರತದಲ್ಲಿ ಸಹಕಾರ ಚಳುವಳಿ ತನ್ನ ಛಾಪು ಮೂಡಿಸುವಲ್ಲಿ ಯಶಸ್ವಿಯಾಗಲು ಆರು ತಂತ್ರಗಾರಿಕಾ ಸ್ಥಂಭಗಳನ್ನು ಈ ನೀತಿಯಲ್ಲಿ ಹೆಸರಿಸಲಾಗಿದೆ. 1. ಬುನಾದಿಯನ್ನು ಬಲ ಗೊಳ್ಳಿಸುವುದು. 2. ಕಂಪನ ಶೀಲತೆ (ಸ್ಪಂದನೆ) ಉತ್ತೇಜಿಸುವುದು 3. ಭವಿಷ್ಯಕ್ಕಾಗಿ ಸಹಕಾರ ಸಂಸ್ಥೆಗಳನ್ನು ರೂಪಿಸುವುದು 4. ಒಳಗೊಳ್ಳುವಿಕೆ ಮತ್ತು ಕಟ್ಟಕಡೆಯ ವ್ಯಕ್ತಿಯನ್ನು ತಲುಪುವುದನ್ನು ಪ್ರೋತ್ಸಾಹಿಸುವುದು 5. ಉದಯೋನ್ಮುಕ ವಲಯಗಳನ್ನು ಪ್ರವೇಶಿಸುವುದು 6. ಸಹಕಾರ ಬೆಳವಣಿಗೆಗಾಗಿ ಯುವ ಜನತೆಯನ್ನು ರೂಪಿಸುವುದು.

ಸಂವಿಧಾನತ್ಮಕವಾಗಿ 'ಸಹಕಾರ' ರಾಜ್ಯ ವಿಷಯವಾಗಿದೆ. ರಾಜ್ಯ ಸರ್ಕಾರಗಳು, ಮಿಗಿಲಾಗಿ ಶೃಂಗ ಸಂಸ್ಥೆಗಳು ಈ ನೀತಿಯ ಅನುಷ್ಠಾನದ ಜವಾಬ್ದಾರಿ ಹೊರಬೇಕಾಗಿದೆ. ಅದಕ್ಕಾಗಿ ಅನುಷ್ಠಾನಗೊಳಿಸಬಹುದಾದ ಕಾರ್ಯಯೋಜನೆ ರೂಪಿಸುವ ಅವಶ್ಯಕತೆ ಇದೆ. ಇದರಿಂದ ಸಹಕಾರದ ಬೆಳವಣಿಗೆ ಸಾಧ್ಯವಾಗುತ್ತದೆ. ಇದಕ್ಕೆ ಪೂರಕವಾದ ಪರಿಸರ ನಿರ್ಮಾಣ ಸಹಕಾರಿಗಳ ಮತ್ತು ಸೂಕ್ತ ನಾಯಕತ್ವದ ಜವಾಬ್ದಾರಿಯಾಗಿದೆ.

**ಸಹಕಾರ ಪರಿಸರ ನಿರ್ಮಾಣ :** ಸಹಕಾರ ಚಳುವಳಿ ಜನರ ಚಳುವಳಿ. ಅದು 'ಸದಸ್ಯ' ಕೇಂದ್ರಿಕೃತ. ನಾಯಕತ್ವ ಚಾಲಿತ. ಇದು ಪ್ರಜಾತಂತ್ರ ವ್ಯವಸ್ಥೆಯನ್ನು ಒಳಗೊಂಡಿದೆ. ಪ್ರಾಮಾಣಿಕ, ಸಕಾರತ್ಮಕ ದೃಷ್ಟಿಕೋನವುಳ್ಳ, ದೂರದೃಷ್ಟಿ ವುಳ್ಳ, ಸ್ವಹಿತಾಸಕ್ತಿ ರಹಿತ, ಹೊಣೆಗಾರಿಕೆ ಅರಿತ ನಾಯಕತ್ವದ ಅವಶ್ಯಕತೆ ಇದೆ. ಅದಕ್ಕೆ ಪೂರಕವಾಗಿ ಸಹಕಾರ ಕಾಯ್ದೆ, ಕಾನೂನುಗಳು ಮುಖ್ಯ ಪಾತ್ರ ನಿರ್ವಹಿಸುತ್ತದೆ. ಕಾಯ್ದೆ, ಕಾನೂನುಗಳು ಸರಳವಾಗಿ ಸುಲಭವಾಗಿ ಅನುಷ್ಠಾನ ಪೂರಕವಾಗಿ ಇರಬೇಕಾಗಿದೆ. ಇತ್ತೀಚಿನ ಕರ್ನಾಟಕ ಉಚ್ಛ ನ್ಯಾಯಾಲಯದ ತೀರ್ಪು ನಮ್ಮ ಕಾಯ್ದೆ, ಕಾನೂನು ಸಂಕೀರ್ಣವಾಗಿದ್ದು ಸ್ವಾಯತ್ತ ವಾಗಿ ಸಹಕಾರ ಸಂಘಗಳು ಕಾರ್ಯಚರಣೆ ಮಾಡಲು ಅನುಕೂಲಕರವಾಗಿ ಸಮಗ್ರ ತಿದ್ದುಪಡಿ ಬಗ್ಗೆ ಮನವರಿಕೆ ಮಾಡಿಕೊಟ್ಟಿದೆ.

ಈ ಮೇಲಿನ ವಿಶ್ಲೇಷಣೆಯಂತೆ ಹಾಲಿ ಕಾರ್ಯನಿರ್ವಹಿಸುತ್ತಿರುವ ವಲಯಗಳನ್ನು ಬಲಪಡಿಸುವುದಲ್ಲದೆ 21ನೇ ಶತಮಾನದ ನವೀನ ಅಗತ್ಯತೆಗಳ ಪೂರೈಕೆಗೆ, ಹೊರ ಹೊಮ್ಮುತ್ತಿರುವ ನವ ಜನ ಸಮೂಹದ ಆಸೆ, ಆಕಾಂಕ್ಷೆ, ನಿರೀಕ್ಷೆಗಳನ್ನು ಪೂರೈಸಲು ಸಹಕಾರ ವಲಯದಿಂದ ಸಾಧ್ಯ ಎಂಬುದರ ಅರಿವು ಯುವ ಸಮೂಹ ಮನಗಂಡಲ್ಲಿ 'ಸಹಕಾರ ಚಳುವಳಿ' ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳಲು ಸಾಧ್ಯ. ಅಸಮಾನತೆಯನ್ನು ಅಳಿದು ಸಮತಾ ಸಮಾಜ ನಿರ್ಮಾಣದಲ್ಲಿ ಸಹಕಾರ ಪ್ರಮುಖ ಪಾತ್ರ ನಿರ್ವಹಿಸಬಲ್ಲದು ಎಂಬುದು ಸಹಕಾರಿಗಳ ಸದಾಶಯ. ಇದರಿಂದ ವಿಕಸಿತ ಭಾರತದ ಕನಸು ನನಸಾಗಬಲ್ಲದು.

**ಹೊಸ ಚಿಗುರು ಹಳೆಬೇರು ಕೂಡಿರಲು ಮರ ಸೊಬಗು।**
**ಹೊಸ ಯುಕ್ತಿ ಹಳೆತತ್ವದೊಡಗೂಡೆ ಧರ್ಮ।**
**ಋಷಿ ವಾಕ್ಯದೊಡನೆ ವಿಜ್ಞಾನ ಕಲೆ ಮೇಳವಿಸೆ।**
**ಜಸವು ಜನ ಜೀವನಕೆ – ಮಂಕುತಿಮ್ಮ॥**

**– ಡಿ.ವಿ.ಜಿ.**